ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೦೬**

**ಒಟ್ಟು ಪ್ರಶ್ನೆಗಳು – ೭೮**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಸೋಮವಾರ, ದಿನಾಂಕ : ೩೦ನೇ ಜೂನ್, ೨೦೧೪**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಔಷಧಿಗಳ ಖರೀದಿಗಾಗಿ ಒದಗಿಸಿದ ಅನುದಾನ

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೨೨ (೩೦೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳ ಅವಧಿಯಲ್ಲಿ ರಾಜ್ಯ ಸರ್ಕಾರವು ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿಗಳ ಖರೀದಿಗಾಗಿ ಒದಗಿಸಿದ ಅನುದಾನ ಎಷ್ಟು ; (ವರ್ಷವಾರು, ಜಿಲ್ಲಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು) ;

(ಆ) ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಸರಬರಾಜು ಮಾಡುವ ನಿಟ್ಟಿನಲ್ಲಿ ಔಷಧಿಗಳ ಕೊರತೆ ಇದೆಯೇ ; ಎಷ್ಟು ಪ್ರಮಾಣದ ಕೊರತೆ ಇದೆ (ಮಾಹಿತಿ ಒದಗಿಸುವುದು) ;

(ಇ) ಕಳೆದ ೫ ವರ್ಷಗಳಲ್ಲಿ ಖಾಸಗಿ ಔಷಧಿ ಕಂಪನಿಗಳಿಂದ ರಾಜ್ಯ ಸರ್ಕಾರವು ಖರೀದಿಸಿದ ಔಷಧಿ ಪ್ರಮಾಣ ಎಷ್ಟು; ಅದಕ್ಕಾಗಿ ವಿನಿಯೋಗಿಸಿದ ಅನುದಾನ ಎಷ್ಟು (ಪ್ರತ್ಯೇಕ ಮಾಹಿತಿ ಒದಗಿಸುವುದು) ;

(ಈ) ರಾಜ್ಯ ಸರ್ಕಾರಕ್ಕೆ ಮೇಲ್ಕಂಡ ಅವಧಿಯಲ್ಲಿ ಔಷಧಿ ಸರಬರಾಜು ಮಾಡುತ್ತಿರುವ ಸಂಸ್ಥೆ/ಕಂಪನಿಗಳು ಯಾವುವು; ಔಷಧಿ ಪ್ರಮಾಣ, ಪಾವತಿಸಲಾದ ಮೊತ್ತ, ಖರೀದಿಗಾಗಿ ಅನುಸರಿಸುತ್ತಿರುವ ಮಾನದಂಡಗಳೇನು (ಇವುಗಳ ಪ್ರತ್ಯೇಕ ಮಾಹಿತಿ ಒದಗಿಸುವುದು) ?

## ಕರ್ನಾಟಕ ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟುಗಳ ಉಪಯೋಜನೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೨೩ (೩೭೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟುಗಳ ಉಪಯೋಜನೆ ಅಧಿನಿಯಮವನ್ನು ರಾಜ್ಯ ಸರ್ಕಾರ ಅಂಗೀಕರಿಸಿದೆಯೇ;

(ಆ) ಈ ಅಧಿನಿಯಮದ ಅನ್ವಯ ಇಲಾಖೆಯ ವತಿಯಿಂದ ಕಾನೂನು ರಚಿಸಲಾಗಿದೆಯೇ;

(ಇ) ಕಾನೂನು ರಚಿಸಲು ಇರುವ ಅಡೆತಡೆಗಳೇನು ಮತ್ತು ವಿಳಂಬಕ್ಕೆ ಕಾರಣಗಳೇನು ?

## ಬುಕ್ ಬ್ಯಾಂಕ್ ಯೋಜನೆಯಡಿ ಗ್ರಂಥಾಲಯಗಳಿಗೆ ಅನುದಾನ

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೨೪ (೩೭೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖಾಸಗಿ ಸಂಸ್ಥೆಗಳು ನಡೆಸುವ ಡಿಪ್ಲೋಮ, ಇಂಜಿನಿಯರಿಂಗ್, ವೈದ್ಯಕೀಯ ಕಾಲೇಜುಗಳಿಗೆ ಇಲಾಖೆಯ Book Bank ಯೋಜನೆಡಿಯಲ್ಲಿ ಗ್ರಂಥಾಲಯಗಳಿಗೆ ಅನುದಾನ ನೀಡುವ ಸೌಲಭ್ಯ ಇದೆಯೇ ;

(ಆ) ಇದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಯಾವ್ಯಾವ ಸಂಸ್ಥೆಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ?

## ಬುಕ್ ಬ್ಯಾಂಕ್ ಯೋಜನೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೫ (೩೭೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಿಪ್ಲೋಮಾ/ತಾಂತ್ರಿಕ, ವೈದ್ಯಕೀಯ ಖಾಸಗಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಪ.ಜಾ/ಪ. ಪಂಗಡದ ಮಕ್ಕಳಿಗೆ ಇಲಾಖೆಯ Book Bank ಯೋಜನೆಯಡಿಯಲ್ಲಿ ಪಠ್ಯ ಪುಸ್ತಕಗಳನ್ನು ಉಚಿತವಾಗಿ ಒದಗಿಸುವ ಸೌಲಭ್ಯ ಇದೆಯೇ ;

(ಆ) ಇದ್ದಲ್ಲಿ, ಯಾವ ಯಾವ ಕಾಲೇಜುಗಳಿಗೆ ಎಷ್ಟು ಮೊತ್ತದ ಪುಸ್ತಕಗಳನ್ನು ನೀಡಲಾಗಿದೆ (ವಿವರ ಒದಗಿಸುವುದು) ?

## ಗಂಗಾ ಕಲ್ಯಾಣ ಯೋಜನೆಯಡಿ ಕೊರೆದ ಕೊಳವೆ ಬಾವಿಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೬ (೩೦೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಂಬೇಡ್ಕರ್ ಅಭಿವೃದ್ಧಿ ನಿಗಮದಡಿಯಲ್ಲಿ ಗಂಗಾ ಕಲ್ಯಾಣ ಯೋಜನೆ ಮೂಲಕ ೨೦೧೪-೧೫ ರಲ್ಲಿ ಕೊರೆದ ಕೊಳವೆ ಬಾವಿಗಳೆಷ್ಟು ;

(ಆ) ಇವುಗಳಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ಪಂಪ್ ಸೆಟ್‌ಗಳನ್ನು ಅಳವಡಿಸಲಾಗಿದೆ ; ಎಷ್ಟು ಬಾವಿಗಳಿಗೆ ವಿದ್ಯುತ್ ಸಂಪರ್ಕ ನೀಡಲಾಗಿದೆ ?

## ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೭ (೩೭೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಿಪ್ಲೋಮಾ/ತಾಂತ್ರಿಕ ಶಿಕ್ಷಣ ಮತ್ತು ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ಪಡೆದಿರುವ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಾಡಲಾಗುತ್ತಿದೆಯೇ ;

(ಆ) ಕಳೆದ ೩ ವರ್ಷಗಳಿಂದ ಯಾವ ಯಾವ ಶಿಕ್ಷಣ ಸಂಸ್ಥೆಗಳಿಗೆ ಎಷ್ಟು ವಿದ್ಯಾರ್ಥಿಗಳಿಗೆ ಎಷ್ಟೆಷ್ಟು ಶುಲ್ಕ ಮೊಬಲಗನ್ನು ಮರುಪಾವತಿ ಮಾಡಲಾಗಿದೆ ?

## ವಿಮಾ ನಿಗಮದ ಆಸ್ಪತ್ರೆ ಹಾಗೂ ಮೆಡಿಕಲ್ ಕಾಲೇಜಿನ ಜಮೀನು

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೮ (೩೦೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾದಲ್ಲಿ ವಿಮಾ ನಿಗಮದ ಆಸ್ಪತ್ರೆ ವೈದ್ಯಕೀಯ ಕಾಲೇಜು, ನರ್ಸಿಂಗ್ ಕಾಲೇಜು ಮತ್ತು ಪ್ಯಾರಾ ಮೆಡಿಕಲ್ ಕಾಲೇಜು ಪ್ರಾರಂಭಿಸಲು ಎಷ್ಟು ಎಕರೆ ಜಮೀನನ್ನು ನೀಡಲಾಗಿದೆ ;

(ಆ) ಗುಲ್ಬರ್ಗಾದಲ್ಲಿ ವೈದ್ಯಕೀಯ ಆಸ್ಪತ್ರೆ ಮತ್ತು ಮೆಡಿಕಲ್ ಕಾಲೇಜು ಪ್ರಾರಂಭಿಸಲು ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರ ನೀಡಿರುವ ಹಣವೆಷ್ಟು ?

## ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಬಿಡುಗಡೆಯಾದ ಹಣದ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೯(೩೯೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪ ಹಾಗೂ ೨೦೧೪-೧೫ ನೇ ಸಾಲಿನಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಬಿಡುಗಡೆಯಾದ ಹಣವೆಷ್ಟು ;

(ಆ) ಇದೇ ಸಾಲುಗಳಲ್ಲಿ ಇಲಾಖೆಯಲ್ಲಿ ಯಾವ ಯಾವ ಹೊಸ ಆವಿಷ್ಕಾರಗಳ ಬಗ್ಗೆ ಚಿಂತಿಸಲಾಗಿದೆ; ಹಾಗೂ ಅದು ಎಷ್ಟರಮಟ್ಟಿಗೆ ಜಾರಿಗೆ ತರಲಾಗಿದೆ ;

(ಇ) ಬೆಂಗಳೂರು ಮಹಾನಗರವು ೧೯೬೦ ರಂದ ಕೈಗಾರಿಕಾ ನಗರ ಹಾಗೂ ೨೦೦೦ ದಿಂದ ವಿಜ್ಞಾನ ನಗರ ಹಾಗೂ ಮಾಹಿತಿ ತಂತ್ರಜ್ಞಾನ ನಗರವೆಂದು ಪ್ರಖ್ಯಾತಿಯಾಗಿದೆ. ಆದ್ದರಿಂದ ನಗರದಲ್ಲಿ ವಿಜ್ಞಾನ ಮತ್ತು ಕೈಗಾರಿಕಾ ವಸ್ತು ಸಂಗ್ರಹಾಲಯ (Science and Industries Museum) ತೆರೆಯಲು ಯೋಚಿಸಲಾಗಿದೆಯೇ ; ಇಲ್ಲದಿದ್ದರೆ, ತೆರೆಯಲು ಕ್ರಮ ತೆಗೆದುಕೊಳ್ಳಬಾರದೇ ;

(ಈ) ಇದಕ್ಕಾಗಿ ೨೦೧೩-೧೪ ಮತ್ತು ೨೦೧೪-೧೫ ರಲ್ಲಿ ಬಿಡುಗಡೆಯಾದ ಹಣದಲ್ಲಿ ಯಾವ ಯಾವ ವಿಚಾರವಾಗಿ ಹಣವನ್ನು ಖರ್ಚು ಮಾಡಲಾಗಿದೆ (ವಿವರ ನೀಡುವುದು);

(ಉ) ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ (ಕಿಯೋನಿಕ್ಸ್) ವತಿಯಿಂದ ಎಷ್ಟು ಕಿಯೋನಿಕ್ಸ್ ತರಬೇತಿ

ಕೇಂದ್ರಗಳ ಮೂಲಕ ೨೦೧೩-೧೪ ರಲ್ಲಿ ವಿದ್ಯಾವಂತ ಯುವ ನಿರುದ್ಯೋಗಿಗಳಿಗೆ ತರಬೇತಿ ನೀಡಲಾಗಿದೆ (ಜಿಲ್ಲಾವಾರು ತಿಳಿಸುವುದು) ?

## ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಅಂತ್ಯೋದಯ ಕಾರ್ಡ್‌ಗಳು

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೦ (೩೯೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್‌ಗಳ ಸಂಖ್ಯೆ ಎಷ್ಟು ;

(ಆ) ಅನ್ನಭಾಗ್ಯ ಯೋಜನೆಗೆ ಕೇಂದ್ರದಿಂದ ಬರುತ್ತಿರುವ ಅಕ್ಕಿಯ ಪ್ರಮಾಣವೆಷ್ಟು ಮತ್ತು ಹಣವೆಷ್ಟು ;

(ಇ) ಅನ್ನಭಾಗ್ಯ ಯೋಜನೆಯಲ್ಲಿ ನೀಡಲಾಗುತ್ತಿರುವ ಅಕ್ಕಿಯನ್ನು ಎಲ್ಲಿಂದ ಕೊಳ್ಳಲಾಗುತ್ತಿದೆ ; ಎಷ್ಟು ಬೆಲೆಗೆ ಖರೀದಿಸಲಾಗುತ್ತಿದೆ ;

(ಈ) ಪ್ರತಿ ಕೆ.ಜಿ. ಅಕ್ಕಿಗೆ ಕೇಂದ್ರ ಸರ್ಕಾರದ ಪಾಲೆಷ್ಟು ; ರಾಜ್ಯ ಸರ್ಕಾರದ ಪಾಲೆಷ್ಟು ;

(ಉ) ಪಡಿತರ ವಿತರಕರ ಕೆಲಸದ ಅವಧಿ ಬೆಳಗ್ಗೆ ೮.೦೦ ಗಂಟೆಯಿಂದ ರಾತ್ರಿ ೮.೦೦ ಗಂಟೆಯವರೆಗೆ ಇರುತ್ತದೆಯೇ ; ಇದ್ದರೆ, ವಿತರಕರಿಗೆ ಹೆಚ್ಚಿನ ಸವಲತ್ತು ಭತ್ಯೆ ನೀಡರುತ್ತಿದೆಯೇ ; ನೀಡುತ್ತಿಲ್ಲವಾದರೆ ಕಾರಣವೇನು ;

(ಊ) ಪಡಿತರ ಹಾಗೂ ಸೀಮೆಎಣ್ಣೆ ವಿತರಕರು ಪಡಿತರ ಚೀಟಿಯೊಂದಿಗೆ ಆಧಾರ್ ಕಾರ್ಡ್ ಸಂಖ್ಯೆಯನ್ನು ಹೊಂದಾಣಿಕೆ ಮಾಡಲು ನಿರ್ಧರಿಸಿರುವುದು, ಎಸ್.ಎಂ.ಎಸ್. ಕೇಂದ್ರೀಕೃತ ವ್ಯವಸ್ಥೆಯನ್ನು

ಜಾರಿಗೆ ತಂದಿರುವುದು, ಸೀಮೆ ಎಣ್ಣೆಗೆ ಗ್ಯಾಸ್ ಮಾದರಿ ಸಬ್ಸಿಡಿ ಹಣವನ್ನು ಬ್ಯಾಂಕ್‌ನಲ್ಲಿ ಪಡೆಯುವುದರಿಂದ ಜನ ಸಾಮಾನ್ಯರನ್ನು ಮತ್ತು ವಿತರಕರನ್ನು ಪೇಚಿಗೆ ಸಿಲುಕುವಂತಾಗುವುದಿಲ್ಲವೇ;

(ಋ) ಸಗಟು ಮಳಿಗೆಗಳಿಗೆ ಬಯೋಮೆಟ್ರಿಕ್ ಅಳವಡಿಸಲಾಗಿದೆಯೇ ; ಇಲ್ಲದಿದ್ದರೆ ಕಾರಣವೇನು ;

(ೠ) ವಿತರಕರಿಗೆ ಕ್ವಿಂಟಲ್‌ಗೆ ೫.೦೦ ರೂ. ಕಮಿಷನ್ ಹೆಚ್ಚಿಗೆ ಮಾಡಿ, ಸಗಟು ಮಳಿಗೆಗಳಿಗೆ ಕ್ವಿಂಟಲ್‌ಗೆ ೧೬.೦೦ ರೂ. ಹೆಚ್ಚಿಗೆ ಮಾಡಿರುವುದು ಸರಿಯೇ ;

(ಎ) ೬೦ ವರ್ಷವಾದವರಿಗೆ ನ್ಯಾಯ ಬೆಲೆ ಅಂಗಡಿ ಲೈಸನ್ಸ್ ರದ್ದು ಮಾಡುತ್ತಿರುವುದು ಹಾಗೂ ಅನುಕಂಪದ ಆಧಾರದ ಮೇಲೆ ನೀಡುತ್ತಿರುವುದು ಸರ್ಕಾರದ ಮುಂದಿರುವುದೇ ; ಪ್ರತಿ ತಿಂಗಳು, ಪ್ರತಿ ಪಡಿತರ ಚೀಟಿದಾರರಿಂದ ಬಿಲ್ ಬುಕ್‌ಗೆ ಸಹಿ ತೆಗೆದುಕೊಳ್ಳುವುದಲ್ಲದೇ, ಪ್ರತಿ ತಿಂಗಳು ಚೆಕ್‌ಲಿಸ್ಟ್‌ನಲ್ಲಿ ಸಹಿ ಪಡೆಯಬೇಕಿದ್ದು, ನ್ಯಾಯ ಬೆಲೆ ಅಂಗಡಿಯವರಿಗೆ ಕಳಪೆ ಗುಣಮಟ್ಟದ ಬಯೋಮೆಟ್ರಿಕ್‌ಯಂತ್ರವನ್ನು ಅಳವಡಿಸಿರುವುದರಿಂದ ಪ್ರತಿ ತಿಂಗಳು ಸಾವಿರಾರು ರೂಪಾಯಿಗಳು ವಿದ್ಯುತ್ ಬಿಲ್ ಪಾವತಿಸಬೇಕಾಗಿದೆ ಎಂಬ ಅಂಗಡಿ ಮಾಲೀಕರ ಆರೋಪಕ್ಕೆ ಸರ್ಕಾರದ ನಿಲುವೇನು ?

## ಪದವೀಧರ ವಿದ್ಯಾರ್ಥಿಗಳ ಹಾಸ್ಟಲ್

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧ (೩೧೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ಪದವೀಧರ ವಿದ್ಯಾರ್ಥಿಗಳ ಹಾಸ್ಟೆಲ್‌ಗಳೆಷ್ಟು ;

(ಆ) ಈ ಹಾಸ್ಟೆಲ್‌ಗಳನ್ನು ಯಾವ ಯಾವ ಜಿಲ್ಲೆಯಲ್ಲಿ ನಡೆಸಲಾಗುತ್ತಿದೆ ;

(ಇ) ಇವುಗಳಿಗೆ ಸುವ್ಯವಸ್ಥಿತ ಕಟ್ಟಡಗಳನ್ನು ಕಟ್ಟಿಸಲಾಗಿದೆಯೇ ?

## ಮೊರಾರ್ಜಿ ವಸತಿ ಶಾಲೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೨ (೩೧೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ನಡೆಸುತ್ತಿರುವ ಮೊರಾರ್ಜಿ ವಸತಿ ಶಾಲೆಗಳೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಇ) ಈ ಎಲ್ಲಾ ವಸತಿ ಶಾಲೆಗಳಿಗೂ ಕಟ್ಟಡದ ವ್ಯವಸ್ಥೆ ಇದೆಯೇ ?

## ಪ್ರೀಮೆಟ್ರಿಕ್ ಹಾಸ್ಟಲ್‌ಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೩ (೩೦೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ರಾಜ್ಯದಲ್ಲಿ ನಡೆಸುತ್ತಿರುವ ಪ್ರಿ–ಮೆಟ್ರಿಕ್ ಹಾಸ್ಟಲ್‌ಗಳೆಷ್ಟು ; ಇವುಗಳಲ್ಲಿ ಹೆಣ್ಣುಮಕ್ಕಳ–ಗಂಡು ಮಕ್ಕಳು ಹಾಸ್ಟಲ್‌ಗಳೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಈ ಹಾಸ್ಟೆಲ್‌ನಲ್ಲಿ ಎಸ್.ಎಸ್.ಎಲ್.ಸಿ., ಪರೀಕ್ಷೆಗೆ ಕುಳಿತ ವಿದ್ಯಾರ್ಥಿಗಳೆಷ್ಟು (ಹೆಣ್ಣು ಮಕ್ಕಳು–ಗಂಡು ಮಕ್ಕಳ ವಿವರ ಪ್ರತ್ಯೇಕವಾಗಿ ನೀಡುವುದು) ;

(ಇ) ಇವರಲ್ಲಿ ಉತ್ತೀರ್ಣರಾದ ವಿದ್ಯಾರ್ಥಿ–ವಿದ್ಯಾರ್ಥಿನಿಯರೆಷ್ಟು ?

03353-2

## ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೪ (೩೧೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೂಡಿಗೆರೆ ಪಟ್ಟಣದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಹಳೆಯ ಕಟ್ಟಡವನ್ನು ನೆಲಸಮಗೊಳಿಸಿ ನೂತನ ಕಟ್ಟಡ ನಿರ್ಮಾಣ ಕಾಮಗಾರಿ ೨ ವರ್ಷ ಕಳೆದರೂ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಟ್ಟಡ ಕಾಮಗಾರಿ ವಿಳಂಭವಾಗಲು ಕಾರಣಗಳೇನು ;

(ಇ) ಸದರಿ ಕಾಮಗಾರಿ ಯಾವಾಗ ಪೂರ್ಣಗೊಳ್ಳುವುದು ?

## ಮಂಗನ ಕಾಯಿಲೆಗೆ ತುತ್ತಾದವರು

**ಶ್ರೀಮತಿ ಭಾರತಿ ಶೆಟ್ಟಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೩೫ (೩೧೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಂಗನ ಕಾಯಿಲೆಗೆ ತುತ್ತಾಗಿರುವವರ ಸಂಖ್ಯೆ ಎಷ್ಟು; ಈ ಪೈಕಿ ಮೃತಪಟ್ಟಿರುವವರ ಸಂಖ್ಯೆ ಎಷ್ಟು (ಕಳೆದ ಮೂರು ವರ್ಷಗಳ ವಿವರವನ್ನು ಜಿಲ್ಲಾವಾರು ನೀಡುವುದು) ;

(ಆ) ಮಂಗನ ಕಾಯಿಲೆಗೆ ತುತ್ತಾಗಿ ಮೃತಪಟ್ಟಿರುವವರಿಗೆ ಸರ್ಕಾರ ಪರಿಹಾರ ನೀಡಿದೆಯೇ ; ಇಲ್ಲದಿದ್ದಲ್ಲಿ ಕಾರಣವೇನು ;

(ಇ) ಮಂಗನ ಕಾಯಿಲೆಗೆ ತುತ್ತಾದವರಿಗೆ ಅಗತ್ಯ ಚಿಕಿತ್ಸೆ ನೀಡಲು ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದಲ್ಲಿ ಮಂಗನ ಕಾಯಿಲೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಿರಿಯ ನಾಗರೀಕರಿಗೆ ವೋಲ್ವೋ ಬಸ್‌ಗಳಲ್ಲಿ ೨೫% ರಿಯಾಯಿತಿ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೨೩೬ (೩೧೭) ಮಾನ್ಯ ಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಹಿರಿಯ ನಾಗರೀಕರಿಗೆ ವೋಲ್ವೋ ಬಸ್‌ಗಳಲ್ಲಿ ೨೫% ರಿಯಾಯಿತಿ ನೀಡುತ್ತಿದ್ದು, ಸದರಿ ರಿಯಾಯಿತಿಯನ್ನು ರಾಜ್ಯಾದ್ಯಂತ ವಿಸ್ತರಿಸುವ ಯೋಜನೆ ಸರ್ಕಾರದ ಮುಂದಿದೆಯೇ ಇದ್ದಲ್ಲಿ ಎಂದಿನಿಂದ ವಿಸ್ತರಿಸಲಾಗುವುದು ?

## ಕಡಿಮೆ ವೇತನದಲ್ಲಿ ದುಡಿಯುತ್ತಿರುವ ಸ್ಟಾಫ್ ನರ್ಸ್‌ಗಳ ಖಾಯಂಯಾತಿ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೨೩೭ (೩೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆಯಲ್ಲಿ ಕಡಿಮೆ ವೇತನದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ಟಾಫ್ ನರ್ಸ್‌ಗಳ ಸಂಕಷ್ಟ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಸ್ಟಾಫ್ ನರ್ಸ್‌ಗಳನ್ನು ಖಾಯಂಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು (ತಿಳಿಸುವುದು) ?

## ಬಡಜನರ ಹೃದ್ರೋಗ ಚಿಕಿತ್ಸೆಗೆ ಸರ್ಕಾರದಿಂದ ನೆರವು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೩೮ (೩೧೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀ ಜಯದೇವ ಹೃದ್ರೋಗ ಚಿಕಿತ್ಸೆ ಸಂಸ್ಥೆಯವರು ರಾಜ್ಯದಲ್ಲಿ ಅತ್ಯುತ್ತಮವಾಗಿ ಸಾರ್ವಜನಿಕ ಸೇವೆ ಸಲ್ಲಿಸುತ್ತಿರುವುದು ಸಾರ್ವಜನಿಕರಿಂದ ಮೆಚ್ಚುಗೆಗೆ ಪಾತ್ರವಾಗಿದ್ದು, ಈ ಸಂಸ್ಥೆಯಿಂದ ರಾಜ್ಯದಲ್ಲಿನ ಪ್ರತಿ ಜಿಲ್ಲೆಯಲ್ಲಿ ತಿಂಗಳಿಗೊಮ್ಮೆ ಹೃದಯ ಖಾಯಿಲೆಯಿಂದ ನರಳುತ್ತಿರುವ ಬಡ ರೈತರಿಗೆ ಚಿಕಿತ್ಸೆ ನೀಡಲು ಸರ್ಕಾರದ ವತಿಯಿಂದ ಶ್ರೀ ಜಯದೇವ ಹೃದ್ರೋಗ ಚಿಕಿತ್ಸಾ ಸಂಸ್ಥೆಗೆ ಹೆಚ್ಚಿನ ಪ್ರೋತ್ಸಾಹ ನೀಡಿ ಬಡ ಜನರ ಹೃದಯ ಚಿಕಿತ್ಸೆ ಮಾಡಲು ಸರ್ಕಾರ ಏನು ಕ್ರಮ ಕೈಗೊಳ್ಳುತ್ತದೆ ?

## ನಗರ ಸಾರಿಗೆ ಬಸ್‌ಗಳಲ್ಲಿ ಜಾಹೀರಾತು ಮತ್ತು ಚಾಲಕರ/ ನಿರ್ವಾಹಕರ ಸುರಕ್ಷತೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೯ (೪೦೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಎಂ.ಟಿ.ಸಿ ಬಸ್‌ಗಳ ಮೇಲೆ ಅಂಟಿಸಿರುವ ಜಾಹೀರಾತು ಫಲಕಗಳಿಂದ ಪ್ರಯಾಣಿಕರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಜಾಹೀರಾತು ಫಲಕಗಳಿಂದ ಹೊಸದಾಗಿ ನಗರಕ್ಕೆ ಬಂದ ಪ್ರಯಾಣಿಕರಿಗೆ ನಿಲ್ದಾಣದ ಗುರುತು ಸಿಗದೆ ಇಳಿಯುಬೇಕಾದ

ಸ್ಥಳಕ್ಕಿಂತ ಮೊದಲು ಅಥವಾ ನಂತರ ಇಳಿದು ತೊಂದರೆ ಅನುಭವಿಸುತ್ತಿದ್ದಾರೆ. ಇದನ್ನು ಸರ್ಕಾರ ಸರಿಪಡಿಸಬಲ್ಲದೆ ;

(ಇ) ಬಸ್‌ಗಳಿಗೆ ಅಂಟಿಸಿರುವ ಜಾಹೀರಾತಿನಿಂದ ಸರ್ಕಾರಕ್ಕೆ ಅಥವಾ ಸಂಸ್ಥೆಗೆ ಬರುವ ಆದಾಯವೆಷ್ಟು ;

(ಈ) ನಗರ ಸಾರಿಗೆ ಸಂಸ್ಥೆಯ ಬಸ್‌ನ ನಿರ್ವಾಹಕ ಮತ್ತು ಚಾಲಕರಿಗೆ ಹಿರಿಯ ಅಧಿಕಾರಿಗಳಿಂದ ಕಿರುಕುಳ ಆಗುತ್ತಿರುವುದು ನಿಜವೇ ; ಸರ್ಕಾರ ಇದನ್ನು ಗಮನಿಸಿ ಕ್ರಮ ಕೈಗೊಂಡಿದೆಯೇ ; ಅಥವಾ ನಿರ್ಲಕ್ಷಿಸಿದೆಯೇ (ವಿವರ ನೀಡುವುದು) ?

## ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೦ (೪೦೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಸಮಾಜ ಕಲ್ಯಾಣ ಇಲಾಖೆಯಲ್ಲಿರುವ ಒಟ್ಟು ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು ; ಬೇರೆ ಇಲಾಖೆಗಳಿಂದ ಸಿಬ್ಬಂದಿಗಳನ್ನು ಎರವಲು ಪಡೆಯಲಾಗಿದೆಯೇ ; ಇದರಿಂದ ಸಂಬಂಧಪಟ್ಟ ಇಲಾಖೆಗೆ ಸಿಬ್ಬಂದಿಗಳ ಸಮಸ್ಯೆ ಎದುರಾಗಿದೆ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಿಯೋಜನೆ ಮೇಲೆ ಬಂದ ನೌಕರರ ಸಂಖ್ಯೆ ಎಷ್ಟು; ಎರವಲು ನೌಕರರು ಸಮರ್ಪಕವಾಗಿ ಕೆಲಸ ಮಾಡುತ್ತಿಲ್ಲ ಎಂಬ ವಿಷಯ ಸರ್ಕಾರಕ್ಕೆ ತಿಳಿದಿದೆಯೇ ; ಇಂತಹವರ ಮೇಲೆ ಸರ್ಕಾರ ಏಕೆ ನಿರ್ದಾಕ್ಷಿಣ್ಯ ಕ್ರಮ ಜರುಗಿಸುತ್ತಿಲ್ಲ (ವಿವರ ನೀಡುವುದು) ;

(ಇ) ಸ್ವ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆಯಿದ್ದಲ್ಲಿ ಹೊಸದಾಗಿ ನೇಮಿಸಿಕೊಳ್ಳುವ ಪ್ರಕ್ರಿಯೆ ಸರ್ಕಾರದ ಮುಂದಿದೆಯೇ ; ಯಾವ-

ಯಾವ ಇಲಾಖೆಯ ನೌಕರರು ಎರವಲು ಸೇವೆ ಸಲ್ಲಿಸುತ್ತಿದ್ದಾರೆ (ವಿವರ ನೀಡುವುದು) ;

(ಈ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿರುವ ಒಟ್ಟು ನೌಕರರ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ?

**ನಕಲಿ ಪಡಿತರ ಚೀಟಿಗಳು**

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೧ (೪೦೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ನಕಲಿ ಪಡಿತರ ಚೀಟಿಗಳಿವೆ ಎಂದು ಸರ್ಕಾರ ಪತ್ತೆ ಹಚ್ಚಿದೆಯೇ ; ರಾಜ್ಯದಲ್ಲಿ ವಿತರಣೆಯಾಗಿರುವ ಅಸಲಿ ಕಾರ್ಡುಗಳೆಷ್ಟು (ವಿವರ ನೀಡುವುದು) ;

(ಆ) ನಕಲಿ ಪಡಿತರ ಚೀಟಿ ಹೊಂದಿದವರಿಗೆ ಶಿಕ್ಷೆ ನೀಡಲಾಗಿದೆಯೇ ; ಯಾವ ರೀತಿಯ ಶಿಕ್ಷೆ ಅಥವಾ ನಕಲಿ ಕಾರ್ಡು (ಹೆಚ್ಚುವರಿ ಕಾರ್ಡು) ವಶಪಡಿಸಿಕೊಂಡ ನಂತರ ಅವರಿಗೆ ಯಾವುದೇ ಶಿಕ್ಷೆಯಿಂದ ವಿನಾಯಿತಿ ನೀಡಲಾಗಿದೆಯೇ ; ಇದರ ಬಗ್ಗೆ ಸರ್ಕಾರದ ನಿಲುವೇನು ;

(ಇ) ಪಡಿತರ ಕಾರ್ಡುದಾರರಿಗೆ ಮಾಹೆಯಾನ ನೀಡುತ್ತಿರುವ ಪಡಿತರದಿಂದ ಸರ್ಕಾರಕ್ಕೆ ಬರುವ ವೆಚ್ಚದ ವಿವರ ನೀಡುವುದು ; ನಕಲಿ ಕಾರ್ಡುಗಳಿಂದ ಸರ್ಕಾರಕ್ಕೆ ಆಗುತ್ತಿರುವ ನಷ್ಟದ ವಿವರ ನೀಡುವುದು ;

(ಈ) ಅಸಲಿ ಮತ್ತು ನಕಲಿ ಕಾರ್ಡುಗಳನ್ನು ಹೇಗೆ ಪತ್ತೆ ಹಚ್ಚಲಾಗುತ್ತಿದೆ ; ಅಧಿಕಾರಿಗಳಿಗೆ ಸರ್ಕಾರ ನೀಡಿರುವ ನಿರ್ದೇಶನಗಳೇನು ?

## ಪ್ರತಿಭಾವಂತ ವೈದ್ಯಕೀಯ ವಿದ್ಯಾರ್ಥಿಗಳ ಹಿತರಕ್ಷಣೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೨ (೩೯೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ವೈದ್ಯಕೀಯ ಕಾಲೇಜುಗಳೆಷ್ಟು ಹಾಗೂ ಸದರಿ ಕಾಲೇಜುಗಳಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು (ವಿವರ ನೀಡುವುದು) ;

(ಆ) ರಾಜ್ಯಕ್ಕೆ ವೈದ್ಯಕೀಯ ಸೀಟುಗಳ ಸಂಖ್ಯೆಯನ್ನು ಕಡಿತಗೊಳಿಸಿರುವುದು ಸರ್ಕಾರಕ್ಕೆ ತಿಳಿದಿದೆಯೇ ; ಸೀಟುಗಳನ್ನು ಕಡಿತಗೊಳಿಸಲು ಕಾರಣಗಳೇನು ; ಹೆಚ್ಚಿನ ಸೀಟುಗಳನ್ನು ಪಡೆಯಲು ಸರ್ಕಾರದ ಮುಂದಿನ ನಿಲುವೇನು ; ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ (ವಿವರ ನೀಡುವುದು) ;

(ಇ) ರಾಜ್ಯದ ಪ್ರತಿಭಾವಂತ ವಿದ್ಯಾರ್ಥಿಗಳು ಪರ ರಾಜ್ಯಗಳತ್ತ ಮುಖ ಮಾಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕಾರಣಗಳೇನು ತಿಳಿಸುವುದು ;

(ಈ) ಪ್ರತಿಭಾವಂತ ವಿದ್ಯಾರ್ಥಿಗಳ ಸಮಸ್ಯೆಗಳಿಗೆ, ಮೌಲ್ಯಾಧಾರಿತ ಶಿಕ್ಷಣಕ್ಕೆ ಸರ್ಕಾರ ಒತ್ತು ಕೊಟ್ಟಿಲ್ಲ ಎಂಬುದು ನಿಜವೇ ; ವೈದ್ಯಕೀಯ ವಿದ್ಯಾರ್ಥಿಗಳ ಹಿತರಕ್ಷಣೆಗೆ ಅವರ ವಿದ್ಯಾಭ್ಯಾಸ ಕುರಿತಂತೆ ಸರ್ಕಾರದ ನಿಲುವೇನು ?

## ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳು

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೩ (೩೨೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗನುಗುಣವಾಗಿ ವಿದ್ಯಾರ್ಥಿ ನಿಲಯ(ವಸತಿ ನಿಲಯ) ಸೌಲಭ್ಯ ಒದಗಿಸಲು ಲಭ್ಯವಿರಬೇಕಾದ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಸದರಿ ಜನಾಂಗದ ವಿದ್ಯಾರ್ಥಿಗಳ ವಸತಿ ನಿಲಯಕ್ಕಾಗಿ ಕಟ್ಟಡ ಕಟ್ಟಲು ಹಾಲಿ ಲಭ್ಯವಿರುವ ಒಟ್ಟು ಜಾಗಗಳೆಷ್ಟು ;

(ಇ) ಸದರಿ ಕೊರತೆ ನೀಗಿಸಲು ಹಾಗೂ ಲಭ್ಯವಿರುವ ಖಾಲಿ ಜಾಗವನ್ನು ಸಕಾಲದಲ್ಲಿ ಉಪಯೋಗಿಸಿಕೊಂಡು ವಸತಿ ನಿಲಯಗಳ ಕಟ್ಟಡ ಕಟ್ಟಲು ಸರ್ಕಾರ ತೆಗೆದುಕೊಳ್ಳುತ್ತಿರುವ ತುರ್ತು ಕ್ರಮಗಳೇನು ?

## ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿ

**ಶ್ರೀ ಸಿ. ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು):-**

೨೪೪ (೩೨೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿ ನಿಲಯಗಳ ಕಟ್ಟಡದ ಕಾಮಗಾರಿಯ ಬಹುತೇಕ ಕೆಲಸಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ವಹಿಸಿರುವುದು ನಿಜವೇ ;

(ಆ) ರಾಜ್ಯದಲ್ಲಿ ಈ ಸಂಘದ ವತಿಯಿಂದ ಕಟ್ಟಲ್ಪಟ್ಟ ಹಾಗೂ ಕಟ್ಟುತ್ತಿರುವ ಬಹುತೇಕ ಕಟ್ಟಡಗಳ ಕಾಮಗಾರಿಗಳ ಗುಣಮಟ್ಟ ಕಳಪೆ ಮಟ್ಟದ್ದಾಗಿದೆ ಎಂಬ ದೂರು ಚಾಲ್ತಿಯಲ್ಲಿದ್ದು, ಸದರಿ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿಯ ದೂರುಗಳು ಕೇಳಿ ಬಂದ ಸಂದರ್ಭದಲ್ಲಿ, ಕಾಮಗಾರಿಯ ಗುಣಮಟ್ಟ ಪರೀಕ್ಷೆಗೆ ಸರ್ಕಾರ ತೆಗೆದುಕೊಳ್ಳುತ್ತಿರುವ ನಿರ್ದಿಷ್ಟ ಕ್ರಮಗಳೇನು ;

(ಈ) ಬಡ ವಿದ್ಯಾರ್ಥಿಗಳು ವಾಸಿಸುವ ಈ ರೀತಿಯ ಕಟ್ಟಡಗಳ ಕಾಮಗಾರಿ ಕಳಪೆ ಮಟ್ಟದ್ದೆಂದು ವರದಿಯಾಗುವ ಸನ್ನಿವೇಶಗಳಲ್ಲಿ ಸದರಿ ವ್ಯವಸ್ಥೆಯನ್ನು ಸರಿಪಡಿಸಲು ಸದ್ಯ ಅನುಸರಿಸಲಾಗುತ್ತಿರುವ ಮಾನದಂಡಗಳೇನು ?

## ಎರವಲು ಸೇವೆಯ ನೌಕರರನ್ನು ವಿಲೀನಗೊಳಿಸಿ ಮೀಸಲಾತಿ ನಿಯಮ ಪಾಲಿಸದಿರುವುದು

**ಶ್ರೀ ಸಿ. ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೫ (೩೨೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಲ್ಲಿ ಎರವಲು ಸೇವೆಯ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸೇವೆಯನ್ನು ಇಲಾಖೆಯಲ್ಲೇ ಖಾಯಂಗೊಳಿಸುವ ಮೂಲಕ ನೇಮಕಾತಿಯಲ್ಲಿ ಮೀಸಲಾತಿ ನಿಯಮಗಳನ್ನು ಪಾಲಿಸದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

03353-3

(ಆ) ಹಾಗೂ ಕಳೆದ ೧೦ ವರ್ಷಗಳಿಂದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಇತರೆ ಅನ್ಯ ಇಲಾಖೆಗಳ ನೇಮಕಾತಿಗಳಲ್ಲಿ ಪಾಲಿಸಬೇಕಾದ ಮೀಸಲಾತಿ ನಿಯಮ(ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ಸಮುದಾಯಗಳಿಗೆ ಮೀಸಲಾತಿ ಅನ್ವಯ ಲಭ್ಯವಾಗಬೇಕಾದ ಅವಕಾಶಗಳು) ವ್ಯವಸ್ಥಿತವಾಗಿ ಪಾಲನೆಯಾಗದಿರುವುದು ನಿಜವೇ ;

(ಇ) ನೇಮಕಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸದಿರುವ ಸಂದರ್ಭಗಳಲ್ಲಿ ಸಂಬಂಧಿಸಿದ ಇಲಾಖಾ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಳ್ಳಬಹುದಾದ ಕಾನೂನಾತ್ಮಕ ಕ್ರಮಗಳೇನು ; ಈ ರೀತಿಯ ಎಷ್ಟು ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ಕಾನೂನು ರೀತ್ಯಾ ಕ್ರಮ ಜರುಗಿಸಲಾಗಿದೆ (ವಿವರಗಳನ್ನು ನೀಡುವುದು) ?

## ಗಂಗಾ ಕಲ್ಯಾಣ ಯೋಜನೆ

**ಶ್ರೀ ಸಿ. ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೬ (೩೨೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ಸಮುದಾಯದ ರೈತರ ಅನುಕೂಲಕ್ಕಾಗಿ ಗಂಗಾ ಕಲ್ಯಾಣ ಯೋಜನೆ ರಾಜ್ಯದಲ್ಲಿ ಜಾರಿಯಲ್ಲಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಕಳೆದ ೧೦ ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಒಟ್ಟು ಕೊರೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಹಾಗೂ ಹಾಲಿ ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುದೀಕರಣ ಸೌಲಭ್ಯ ಒದಗಿಸಲಾಗಿದೆ ; ಬಾಕಿ ಇರುವ ಸಂಖ್ಯೆ ಎಷ್ಟು ;

(ಇ) ಸದರಿ ಫಲಾನುಭವಿಗಳಿಗೆ ಸಕಾಲದಲ್ಲಿ ವಿದ್ಯುದೀಕರಣ ಹಾಗೂ ಪೂರಕ ಸೌಲಭ್ಯ ಒದಗಿಸಲು ಸರ್ಕಾರ ತೆಗೆದುಕೊಳ್ಳುತ್ತಿರುವ ನಿರ್ದಿಷ್ಟ ಕ್ರಮಗಳೇನು ;

(ಈ) ಗಂಗಾ ಕಲ್ಯಾಣ ಯೋಜನೆಯಲ್ಲಿ ಫಲಾನುಭವಿಗಳಿಗೆ ಒದಗಿಸಲಾಗುವ ಪಂಪ್‌ಸೆಟ್ ಹಾಗೂ ಇತರೆ ಪೂರಕ ಸೌಲಭ್ಯಗಳು ಕಳಪೆ ಗುಣಮಟ್ಟದ್ದಾಗಿದೆ ಎಂಬುದು ನಿಜವೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರವ ಕ್ರಮಗಳೇನು ?

## ಸರ್ಕಾರಿ ಬಸ್ಸುಗಳ ಸಂಚಾರಕ್ಕೆ ಪರವಾನಗಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೪೭ (೩೨೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಬಸ್ಸುಗಳ ಪರವಾನಗಿಗಾಗಿ ಕಾಯುತ್ತಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು) ;

(ಆ) ಪ್ರತಿ ಜಿಲ್ಲೆಗಳಲ್ಲಿ ಬಸ್ಸುಗಳ ಪರವಾನಗಿಗಾಗಿ ೬–೮ ತಿಂಗಳುಗಳ ಕಾಲ ಆರ್.ಟಿ.ಓ. ಸಭೆ ಕರೆಯದಿರುವುದು, ನಿಜವೇ ;

(ಇ) ಇದಕ್ಕೆ ಖಾಸಗಿ ಬಸ್ ಮಾಲೀಕರ ಒತ್ತಡ ಕಾರಣವೆನ್ನುವ ಆರೋಪ ಸತ್ಯವೇ ;

(ಈ) ಬಡವರ ಓಡಾಟಕ್ಕೆ ಸರ್ಕಾರಿ ಬಸ್ಸು ಓಡಿಸುವ ಬಗ್ಗೆ ಇಲಾಖೆಯ ಯೋಜನೆಗಳೇನು ;

(ಉ) ಸರ್ಕಾರಿ ಬಸ್ಸುಗಳಲ್ಲಿ ಅಂಗವಿಕಲರು ಮತ್ತು ವೃದ್ಧರಿಗೆ ನೀಡುವ ಸೌಲಭ್ಯ ಖಾಸಗಿ ಬಸ್ಸುಗಳಿಗೆ ವಿಸ್ತರಿಸದಿರಲು ಕಾರಣವೇನು ?

## ಉಡುಪಿ ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಸ್ಥಾಪನೆ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೪೮ (೩೨೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ಹಿಂದಿನ ಸರ್ಕಾರ ಉಡುಪಿ ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಮಂಜೂರು ಮಾಡುವ ಬಗ್ಗೆ ಭರವಸೆ ನೀಡಿದ್ದು ಈಗ ಅದು ಯಾವ ಹಂತದಲ್ಲಿದೆ ;

(ಆ) ಇದುವರೆಗೆ ಮಂಜೂರಾತಿ ಬಗ್ಗೆ ವಿಳಂಬ ನೀತಿ ಅನುಸರಿಸುತ್ತಿರುವುದೇಕೆ ;

(ಇ) ಈ ಭಾಗದ ಬಡ ಕುಟುಂಬದ ಮಕ್ಕಳು, ವೈದ್ಯಕೀಯ ಶಿಕ್ಷಣ ಪಡೆಯಲು ಸರ್ಕಾರದ ಯೋಜನೆಯೇನು (ವಿವರ ನೀಡುವುದು) ?

## ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರ ನೇಮಕಾತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೪೯ (೩೨೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಹುದ್ದೆ ಖಾಲಿಯಾಗಲು ಕಾರಣವೇನು ;

(ಇ) ರಾಜ್ಯದ ಹಿಂದುಳಿದ ವರ್ಗಗಳ ಅಧ್ಯಕ್ಷರ ಹುದ್ದೆ ಖಾಲಿಯಾದ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಜಾತಿ ಜನಗಣತಿಯ ಕಾರ್ಯಕ್ರಮಕ್ಕೆ ಹಿನ್ನಡೆಯಾಗಿದ್ದು ನಿಜವೇ ;

(ಈ) ರಾಜ್ಯ ಹಿಂದುಳಿದ ವರ್ಗದ ಅಧ್ಯಕ್ಷರ ಕರ್ತವ್ಯ ಮತ್ತು ಹೊಣೆಗಾರಿಕೆಯೇನು ?

## ಗ್ರಾಹಕ ನ್ಯಾಯಾಲಯಗಳ ಸ್ಥಾಪನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೫೦ (೩೨೫) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಹಕ ರಕ್ಷಣಾ ಕಾಯ್ದೆಯಂತೆ ಪ್ರತಿ ಜಿಲ್ಲೆಯಲ್ಲಿ ಗ್ರಾಹಕ ನ್ಯಾಯಾಲಯ ಇರಬೇಕಿದ್ದು, ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಗ್ರಾಹಕ ನ್ಯಾಯಾಲಯವಿರುತ್ತದೆ (ಜಿಲ್ಲಾವಾರು ವಿವರ ನೀಡುವುದು) ;

(ಆ) ಗ್ರಾಹಕ ನ್ಯಾಯಾಲಯಗಳಿಲ್ಲದ ಜಿಲ್ಲೆಗಳಲ್ಲಿ ನ್ಯಾಯಾಲಯಗಳನ್ನು ಯಾವಾಗ ಆರಂಭಿಸಲಾಗುವುದು ;

(ಇ) ಗ್ರಾಹಕ ಜಿಲ್ಲಾ ನ್ಯಾಯಾಲಯದಲ್ಲಿ ಇರುವ ನ್ಯಾಯಾಮೂರ್ತಿಗಳ ಅರ್ಹತೆಯೇನು (ವಿವರ ನೀಡುವುದು) ?

## ಆಹಾರ ಸುರಕ್ಷತೆ ಗುಣಮಟ್ಟ ಕಾಯ್ದೆ ಅನುಷ್ಠಾನ

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೧ (೩೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಅನುಷ್ಠಾನವು ಆರೋಗ್ಯ ಇಲಾಖಾ ಅಧೀನ ವ್ಯಾಪ್ತಿಗೊಳಪಡುತ್ತದೆಯೇ ; ಈ ಕಾರ್ಯ ಸ್ವರೂಪ ನಿರ್ವಹಣಾ ಹುದ್ದೆಗಳು ಆರೋಗ್ಯ ಮತ್ತು ಆಹಾರ ಈ ಎರಡೂ ಇಲಾಖೆಗಳಲ್ಲೂ ಇದೆಯೇ ;

(ಆ) ಈ ನಿಟ್ಟಿನಲ್ಲಿ ಸಾರ್ವಜನಿಕ ಆರೋಗ್ಯ ಸಂಸ್ಥೆಯಿಂದ (ಆರೋಗ್ಯ ಇಲಾಖೆ) ಆಹಾರ ಸುರಕ್ಷತೆ ಮತ್ತು ಗುಣಮಟ್ಟ ವಿಭಾಗವನ್ನು ಬೇರೆ ಇಲಾಖೆಗೆ ಹಸ್ತಾಂತರಿಸುವ ಇರಾದೇ ಸರ್ಕಾರದ ಮುಂದಿದೆಯೇ ; ಇದಕ್ಕೆ ಕಾರಣಗಳನ್ನು ಒದಗಿಸುವುದು ;

(ಇ) ಹಾಗಿದ್ದಲ್ಲಿ, ಯಾವ ಇಲಾಖಾ ವ್ಯಾಪ್ತಿಗೆ ಸದರಿ ಜವಾಬ್ದಾರಿ ನೀಡಲು ಸರ್ಕಾರ ಮುಂದಾಗಿದೆ ; ಇದರ ಹಿಂದಿನ ಉದ್ದೇಶಗಳೇನು ;

(ಈ) ಆರೋಗ್ಯ ಇಲಾಖೆಯಲ್ಲಿ ಹಾಲಿ ಆಹಾರ ಸುರಕ್ಷತಾ ಅಧಿಕಾರಿಗಳ, ನಿರೀಕ್ಷಕರ ಹುದ್ದೆಗಳು ಖಾಲಿ ಇರುವುದು ನಿಜವೇ ; ಇದ್ದಲ್ಲಿ ಯಾವಾಗಿನಿಂದ ಖಾಲಿ ಇವೆ ; ಇದುವರೆಗೂ ಭರ್ತಿಮಾಡದಿರಲು ಕಾರಣಗಳೇನು ; ಯಾವಾಗ ನೇಮಕ ಮಾಡಿಕೊಳ್ಳಲಾಗುತ್ತದೆ ;

(ಉ) ಈ ಹುದ್ದೆಗಳಿಗೆ ಯಾವ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ ; ಪ್ರಸ್ತುತ ಆರೋಗ್ಯ ಸಹಾಯಕರಾಗಿರುವ ಆರೋಗ್ಯ ಇಲಾಖೆಯ

ಎಂ.ಎಸ್.ಸಿ., ಪದವೀಧರ (ಹುದ್ದೆಗೆ ಅರ್ಜಿ ಸಲ್ಲಿಸಿದ) ಅಭ್ಯರ್ಥಿಗಳನ್ನು ಸರ್ಕಾರ ಪರಿಗಣಿಸುವುದೇ ;

(ಊ) ಸದರಿ ಹುದ್ದೆಗಳಿಗೆ ವೈದ್ಯರನ್ನು ನಿಯೋಜನೆ ಮೇಲೆ ಕಳುಹಿಸಿದ ಪ್ರಕರಣದಲ್ಲಿನ ದೂರುಗಳ ಬಗ್ಗೆ ಸರ್ಕಾರದ ನಿಲುವೇನು ; ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ ; ಯಾವಾಗ ವೈದ್ಯರ ಸೇವೆಯನ್ನು ಇಲ್ಲಿಂದ ತೆರವುಗೊಳಿಸಲು ಮುಂದಾಗುವುದು ?

## ಆಸ್ಪತ್ರೆಗಳಲ್ಲಿ ರಿಯಾಯ್ತಿ ಆಹಾರ ಸರಬರಾಜು

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೨ (೩೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಮಿಳುನಾಡು ಮಾದರಿಯಲ್ಲಿ ರಾಜ್ಯ ಸರ್ಕಾರದ ಆಸ್ಪತ್ರೆಗಳಲ್ಲಿ ರೋಗಿ ಹಾಗೂ ಅವರ ಜೊತೆಗಿರುವವರಿಗೆ ರಿಯಾಯ್ತಿ ದರದಲ್ಲಿ ಇಡ್ಲಿ ಆಹಾರ ಪದಾರ್ಥಗಳನ್ನು ವಿತರಿಸಲು ರಾಜ್ಯ ಸರ್ಕಾರ ಉದ್ದೇಶಿಸಿದೆಯೇ ;

(ಆ) ಹಾಗಿದ್ದಲ್ಲಿ, ಇದು ಯಾವಾಗಿನಿಂದ ಜಾರಿಗೆ ಬರುತ್ತದೆ ; ಯಾವ ಮಾದರಿಯ ಆಸ್ಪತ್ರೆಗಳಲ್ಲಿ ಈ ಸೌಲಭ್ಯ ಸಿಗಲಿದೆ ; ಆಸ್ಪತ್ರೆಗಳಲ್ಲಿ ಪ್ರತ್ಯೇಕವಾಗಿ ಕ್ಯಾಂಟಿನ್‌ಗಳನ್ನು ಸ್ಥಾಪಿಸಲಾಗುವುದೇ ; ಹಾಲಿ ಗುರುತಿಸಿದ ಜಿಲ್ಲೆ ಮತ್ತು ಆಸ್ಪತ್ರೆಗಳ್ಯಾವುವು ;

(ಇ) ಇದರ ನಿರ್ವಹಣೆಯನ್ನು ಆಸ್ಪತ್ರೆ ಸಿಬ್ಬಂದಿಗಳೇ ಮಾಡುವರೇ ಅಥವಾ ಖಾಸಗಿಯವರಿಗೆ ನೋಡಿಕೊಳ್ಳಲು ಅವಕಾಶ ಮಾಡಿಕೊಡುವುದೇ (ವಿವರ ಒದಗಿಸುವುದು) ;

(ಈ) ಈ ಯೋಜನೆಯ ಅನುಷ್ಠಾನಕ್ಕೆ ಆರೋಗ್ಯ ಇಲಾಖೆಯ ಜೊತೆಗೆ ಆಹಾರ ಇಲಾಖೆಯು ಸಹಕರಿಸುವುದೇ ;

(ಉ) ಇಡ್ಲಿ ಅಲ್ಲದೇ ಬೇರೆ ಯಾವ ಆಹಾರ ಪದಾರ್ಥಗಳನ್ನು ರಿಯಾಯ್ತಿ ದರದಲ್ಲಿ ನೀಡಲಾಗುತ್ತದೆ ; ಇದು ಕಾಫಿ-ಟೀ, ಹಾಲು ಇತ್ಯಾದಿ ಪಾನೀಯಗಳಿಗೂ ಅನ್ವಯಿಸುವುದೇ ; ಆಹಾರ ವಿತರಣೆಗೂ ಮೊದಲು ಆಸ್ಪತ್ರೆಗಳಲ್ಲಿ ಶುದ್ಧ ಕುಡಿಯುವ ನೀರಿನ ಹಾಗೂ ಮೂಲಭೂತ ಸೌಲಭ್ಯ ಕಲ್ಪಿಸಲು ಸರ್ಕಾರ ಉತ್ಸಾಹ ತೋರುವುದೇ (ವಿವರಿಸುವುದು) ?

## ಸಾರಿಗೆ ಬಸ್ಸುಗಳಲ್ಲಿ ಬೆಂಕಿ ಅವಗಡ

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೩ (೩೨೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚೆಗೆ ಸಾರಿಗೆ ಸಂಸ್ಥೆಯು ಸೇರಿದಂತೆ, ವಿವಿಧ ಖಾಸಗಿ ಬಸ್ಸುಗಳು ವಿಶೇಷವಾಗಿ ವೋಲ್ವೋ ಹಾಗೂ ಐಷಾರಾಮಿ ವಾಹನಗಳು ಬೆಂಕಿ ಅಪಘಾತಕ್ಕೊಳಗಾಗುತ್ತಿರುವ ಘಟನೆಗಳು ಜರುಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಲ್ಲೆಲ್ಲಿ ಇಂತಹ ಘಟನೆಗಳು ಜರುಗಿವೆ ; ಇದರಿಂದ ಪ್ರಾಣಹಾನಿಗೊಳಗಾದವರ ಸಂಖ್ಯೆ ಹಾಗೂ ಇವರಿಗೆ ಸರ್ಕಾರ ಸೂಕ್ತ ಪರಿಹಾರಗಳನ್ನು ನೀಡಿದೆಯೇ ;

(ಇ) ಆಕಸ್ಮಿಕ ಬೆಂಕಿ ಅನಾಹುತಕ್ಕೆ ಕಾರಣಗಳೇನು ; ಈ ಬಗ್ಗೆ ತನಿಖೆ ಕೈಗೊಳ್ಳಲಾಗಿಯೇ (ತನಿಖಾ ವರದಿಯ ವಿವರ ನೀಡುವುದು) ;

(ಈ) ರಾಜ್ಯದಲ್ಲಿ ಜರುಗಿದ ಈ ರೀತಿಯ ಘಟನೆ ಹಾಗೂ ರಾಜ್ಯದ ಹೊರಭಾಗದಲ್ಲಿ ನಡೆದ ಘಟನೆಗಳ ಹಾಗೂ ಬೆಂಕಿ ಆಕಸ್ಮಿಕಕ್ಕೊಳ್ಳಗಾದ ವಾಹನಗಳು ಸಾರಿಗೆ ಸಂಸ್ಥೆಯವೇ ಅಥವಾ ಖಾಸಗೀ ವಾಹನಗಳೇ ವಿವರ ನೀಡುವುದು ;

(ಉ) ಈ ರೀತಿಯ ವಾಹನಗಳಲ್ಲಿ ಲಗ್ಗೇಜ್‌ನಲ್ಲಿ ಅಪಾಯಕಾರಿ ರಾಸಾಯನಿಕಗಳು ಪತ್ತೆಯಾಗಿರುವ ಬಗ್ಗೆ ಸರ್ಕಾರದ ನಿಲುವೇನು ;

(ಊ) ಮೇಲಿನ ಘಟನೆಗಳ ಕಾರಣದಿಂದ ದೂರಪ್ರಯಾಣಕ್ಕೆ ಯಾವ ರೀತಿಯ ಸುರಕ್ಷತೆಗಳನ್ನು ಸಾರಿಗೆ ಇಲಾಖೆ ಕೈಗೊಂಡಿದೆ ?

## ಒಂದೇ ಮೋಟಾರು ನೊಂದಣಿಯಲ್ಲಿ ಅಕ್ರಮ ಸಾಗಾಟ ಮಾಡುವ ದಂದೆ

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೪ (೩೩೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರದ ಅಧಿಕೃತ ಲೆಕ್ಕದ ಪ್ರಕಾರ ಇಲಾಖೆಯಿಂದ ನೊಂದಣಿಗೊಂಡಿರುವ ಸಾರ್ವಜನಿಕ ಪ್ರಯಾಣಿಕ ವಾಹನಗಳ ಸಂಖ್ಯೆ ವಿವರಗಳನ್ನು ಜಿಲ್ಲಾವಾರು, ಸಾರಿಗೆ ಸಂಸ್ಥೆವಾರು, ಖಾಸಗಿವಾರು ಸಹಿತ ಮಾಹಿತಿ ನೀಡುವುದು ;

(ಆ) ಈ ರೀತಿಯ ಸಾರಿಗೆ ಇಲಾಖೆಯ ನೊಂದಣಿಯಿಲ್ಲದೆ ಅಕ್ರಮವಾಗಿ ಸಾಗಾಟ ಮಾಡುತ್ತಿರುವ ಪ್ರಕರಣಗಳು ಬೆಳಕಿಗೆ ಬಂದಿದೆಯೇ ; ಇದಕ್ಕೆ ಕಾರಣಗಳೇನು ; ಈ ರೀತಿಯ ನೊಂದಣಿ ಇಲ್ಲದ ವಾಹನಗಳ ಖಾಸಗಿ ಮಾಲೀಕರು ಯಾರ್ಯಾರು ;

(ಇ) ಇವರುಗಳ ಮೇಲೆ ಇಲಾಖೆಯು ಯಾವ ಕ್ರಮ ಕೈಗೊಂಡಿದೆ ; ಬಸ್ಸುಗಳನ್ನು ವಶಪಡಿಸಿ ಕೊಳ್ಳಲಾಗಿದೆಯೇ (ವಿವರ ನೀಡುವುದು) ;

(ಈ) ಒಂದೇ ನೊಂದಣಿ ಸಂಖ್ಯೆಯ ಮೂಲಕ ೨-೩ ಬಸ್ಸುಗಳನ್ನು ಓಡಿಸುವ ಪರಿಪಾಠ ನಡೆದಿದೆಯೇ ; ಇಂತಹವರಿಗೆ ಯಾವ ಶಿಕ್ಷೆಗಳನ್ನು ವಿಧಿಸಲಾಗಿದೆ ;

(ಉ) ದಾಖಲೆಗಳೇ ಇಲ್ಲದ ರಾಜ್ಯ ರಹದಾರಿ ಪಡೆಯದೆ ಹಾಗೂ ಹೊರರಾಜ್ಯಕ್ಕೂ ಸಂಚಾರಿಸುವಂತಹ ಬಸ್ಸುಗಳ ಸಂಖ್ಯೆ ವಿವರಗಳನ್ನು ಒದಗಿಸುವುದು ; ಅಲ್ಲದೇ ಯಾವ ಅವಧಿಯಿಂದ ಪರವಾನಗಿ ಪಡೆಯದೆ ತೆರಿಗೆ ವಂಚಿಸಲಾಗಿದೆ ; ವಶಪಡಿಸಿಕೊಂಡ ಬಸ್ಸುಗಳ ಹಾಗೂ ಪ್ರಕರಣ ದಾಖಲಾದ ವಿವರಗಳನ್ನು ಒದಗಿಸುವುದು ;

(ಊ) ಇದರಿಂದಾಗಿ ಸಾರಿಗೆ ಇಲಾಖೆಗೆ ಆಗಿರುವ ನಷ್ಟ ಎಷ್ಟು ; ಕಳೆದ ಒಂದು ವರ್ಷದಿಂದ ದಂಡತೆರಿಗೆ ಸಂಗ್ರಹ ಮಾಡಿದ ಮೊತ್ತವೆಷ್ಟು (ವಿವರ ಒದಗಿಸುವುದು) ?

## ಹಿಂದುಳಿದ ವರ್ಗಗಳ ಅಭಿವೃದ್ಧಿ ಯೋಜನೆ

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೫ (೩೮೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಹಿಂದುಳಿದ ಜಾತಿಗಳು (ಓಬಿಸಿ) ವಿದ್ಯಾರ್ಥಿಗಳಿಗೆ ಯಾವ ರೀತಿಯ ವಿದ್ಯಾರ್ಥಿವೇತನ ಹಾಗೂ ಇತರೆ ಸೌಲಭ್ಯಗಳನ್ನು

ಸರ್ಕಾರದಿಂದ ಒದಗಿಸಲಾಗುತ್ತಿದೆ ; ಯೋಜನೆಗಳವಾರು ಹಾಗೂ ಇದರ ಲಾಭ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಗಳನ್ನು ಜಿಲ್ಲಾವಾರು ಮತ್ತು ಇದಕ್ಕೆ ಖರ್ಚಾಗುತ್ತಿರುವ ಮೊತ್ತದ ವಿವರಗಳನ್ನು ಕಳೆದ ೪ ವರ್ಷದ ಮಾಹಿತಿ ನೀಡುವುದು ;

(ಆ) ವಿದ್ಯಾರ್ಥಿ ವೇತನವನ್ನು ಪಡೆಯಲು ಅನುಸರಿಸಬೇಕಾದ ಮಾನದಂಡಗಳೇನು ; ಈ ಯೋಜನೆಯ ಉದ್ದೇಶಕ್ಕಾಗಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರ ನೀಡಿರುವ ಅನುದಾನದ ವಿವರಗಳನ್ನು ನೀಡುವುದು ;

(ಇ) ಇಂತಹ ಹಿಂದುಳಿದ ವರ್ಗದವರ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವಂತಹ ಅನುದಾನವೆಷ್ಟು ; ಇದಕ್ಕೆ ಅಳವಡಿಸಿರುವ ಮಾರ್ಗಸೂಚಿಗಳೇನು ;

(ಈ) ರಾಜ್ಯ ಮತ್ತು ಕೇಂದ್ರ ಸರ್ಕಾರ ನೀಡಿರುವ ಈ ಮೊತ್ತದಲ್ಲಿ ಕಳೆದ ಒಂದು ವರ್ಷದಿಂದ ಖರ್ಚಾಗಿರುವುದೆಷ್ಟು ; ಖರ್ಚಾಗದೇ ಬಾಕಿ ಉಳಿದಿರುವ ಮೊತ್ತವೆಷ್ಟು ;

(ಉ) ಮುಂದಿನ ಶೈಕ್ಷಣಿಕ ಸಾಲಿಗೆ ನಿಗದಿಪಡಿಸಿರುವ ಮೊತ್ತವೆಷ್ಟು ; ಇದರಿಂದ ರಾಜ್ಯದ ಎಷ್ಟು ಹಿಂದುಳಿದ ವಿದ್ಯಾರ್ಥಿಗಳಿಗೆ ಅನುಕೂಲ ಒದಗಿಸಿದಂತಾಗುತ್ತದೆ (ವಿವರ ಒದಗಿಸುವುದು) ?

## ಆಹಾರ ಸುರಕ್ಷತೆ ಮತ್ತು ಗುಣಮಟ್ಟ ನಿಯಂತ್ರಣ ಕಾಯಿದೆಯನ್ನು ಪರಿಣಾಮಕಾರಿಯಾಗಿ ಜಾರಿ ಮಾಡುವ ಬಗ್ಗೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೫೬(೩೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ನಿಯಂತ್ರಣ ಕಾಯಿದೆ ರಾಜ್ಯದಲ್ಲಿ ಯಾವಾಗಿನಿಂದ ಜಾರಿಯಾಗಿದೆ ; ಈ ಕಾಯಿದೆ ಪ್ರಕಾರ ರಾಜ್ಯದಲ್ಲಿ ಸೃಷ್ಠಿಯಾಗಿರುವ, ಭರ್ತಿಯಾಗಿರುವ ಮತ್ತು ಖಾಲಿ ಇರುವ ವಿವಿದ ವೃಂದದ ಹುದ್ದೆಗಳ ವಿವರಗಳನ್ನು ಒದಗಿಸುವುದು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಈ ಕಾಯಿದೆ ಪ್ರಕಾರ ಅಂಕಿತ ಅಧಿಕಾರಿಗಳು ಅಥವಾ ಡೆಸಿಗ್ನೇಟೆಡ್ ಆಫೀಸರ್ಸ್ ಹುದ್ದೆಗಳಿಗೆ ಕೇಂದ್ರ ಪುರಸ್ಕೃತ ಯೋಜನೆಯ ನಿಯಮಗಳ ಪ್ರಕಾರ ಅರ್ಹರಾದ ವೈದ್ಯಾಧಿಕಾರಿಗಳನ್ನು ನೇಮಕ ಮಾಡಿದ್ದರೂ ಕೂಡಾ ಈಗ ಅವರನ್ನು ಆ ಹುದ್ದೆಯಿಂದ ತೆಗೆದು ಅವರ ಬದಲಿಗೆ ಕೆ.ಎ.ಎಸ್. ಅಥವಾ ಆಡಳಿತ ಸೇವೆಯ ಅಧಿಕಾರಿಗಳನ್ನು ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇದೆಯೇ ; ಇದಕ್ಕೆ ಕಾರಣಗಳೇನು ;

(ಇ) ಅಂಕಿತ ಅಧಿಕಾರಿಗಳ (Designated Officers) ಹುದ್ದೆಯು ವೈದ್ಯಕೀಯ ಮತ್ತು ತಾಂತ್ರಿಕ ಸ್ವರೂಪದ ಜವಾಬ್ದಾರಿಯುತ

ಹುದ್ದೆ ಆಗಿದ್ದು, ಕೇಂದ್ರದ ಕಾಯಿದೆಯ ಆಶಯದ ಪ್ರಕಾರವೇ ಈ ಹುದ್ದೆಗೆ ಅರ್ಹ ವೈದ್ಯಾಧಿಕಾರಿಗಳನ್ನು ನೇಮಿಸಿದ್ದು, ಅವರನ್ನೇ ಈ ಹುದ್ದೆಯಲ್ಲಿ ಮುಂದುವರಿಸುವ ಮೂಲಕ ಕೇಂದ್ರದ ಪಾಲಿನ ನೆರವನ್ನು ಪಡೆದುಕೊಳ್ಳಲು ಹಾಗೂ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ವೈದ್ಯಕೀಯ ಕಾಲೇಜು ಆರಂಭ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :–

೨೫೭ (೩೩೪) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದಲ್ಲಿ ವೈದ್ಯಕೀಯ ಕಾಲೇಜನ್ನು ಈ ಸಾಲಿನಿಂದಲೇ ಆರಂಭಿಸಲಾಗುವುದೇ ; ಇದಕ್ಕೆ ಭಾರತೀಯ ವೈದ್ಯಕೀಯ ಮಂಡಳಿ ಅನುಮತಿ ದೊರಕಿದೆಯೇ ; ಎಷ್ಟು ವಿದ್ಯಾರ್ಥಿಗಳಿಗೆ ಈ ಬಾರಿಯ CET ಮೂಲಕ ಪ್ರವೇಶ ನೀಡಲಾಗುವುದು ; ;

(ಆ) ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಅಗತ್ಯವಾದ ಭೂಮಿಯನ್ನು ಆಯ್ದೆ ಮಾಡಿ ಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ (ವಿವರ ಒದಗಿಸುವುದು) ; ತಾತ್ಕಾಲಿಕವಾಗಿ ಯಾವ ಕಟ್ಟಡದಲ್ಲಿ ವೈದ್ಯಕೀಯ ಕಾಲೇಜನ್ನು ಆರಂಭಿಸಲಾಗುವುದು ;

(ಇ) ಈ ವೈದ್ಯಕೀಯ ಕಾಲೇಜು ಆರಂಭಕ್ಕೆ ಬೇಕಾದ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ ;

ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆಯೇ ;

(ಈ) ಈ ವೈದ್ಯಕೀಯ ಕಾಲೇಜನ್ನು ಆರಂಭಿಸಲು ಕೈಗೊಂಡಿರುವ ಕ್ರಮಗಳೇನು (ವಿವರಣೆ ನೀಡುವುದು) ?

## ಫೀಡರ್ ಬಸ್ ವ್ಯವಸ್ಥೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೫೮ (೩೩೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ರಾಜ್ಯ ಸಾರಿಗೆ ಸಂಸ್ಥೆಯ ಕೇಂದ್ರ ಬಸ್ ನಿಲ್ದಾಣದಿಂದ ರೈಲ್ವೆ ನಿಲ್ದಾಣ ಮತ್ತು ಮೈಸೂರು ನಗರ ಸಾರಿಗೆ ಬಸ್ ನಿಲ್ದಾಣಕ್ಕೆ ಫೀಡರ್ ಬಸ್ ವ್ಯವಸ್ಥೆ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಪ್ರತಿ ೧೫ ನಿಮಿಷಕ್ಕೊಮ್ಮೆ ರೈಲ್ವೆ ನಿಲ್ದಾಣದಿಂದ ಹೊರಟು ಕೇಂದ್ರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣ ಮತ್ತು ನಗರ ಸಾರಿಗೆ ನಿಲ್ದಾಣಕ್ಕೆ ಅದೇ ರೀತಿ ನಗರ ಸಾರಿಗೆ ನಿಲ್ದಾಣದಿಂದ ಫೀಡರ್ ಬಸ್ ವ್ಯವಸ್ಥೆ ಕಲ್ಪಿಸಿ, ಪ್ರವಾಸಿಗರಿಗೆ ಬೇರೆಬೇರೆ ಊರುಗಳಿಂದ ಬರುವ ಸಾವಿರಾರು ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

# ರಾಜ್ಯ ರಸ್ತೆ ಸಾರಿಗೆ ಬಸ್ ಸೌಲಭ್ಯ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೫೯ (೩೩೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರ :-

(ಅ) ಮೈಸೂರಿನಿಂದ ಶ್ರೀರಂಗಪಟ್ಟಣ-ಪಾಂಡವಪುರ ರೈಲು ನಿಲ್ದಾಣ-ಚಿನಕುರಳಿ-ಕೃಷ್ಣರಾಜಪೇಟೆ-ಸಂತೇಬಾಚಹಳ್ಳಿ-ಬೆಟ್ಟದಹಳ್ಳಿ-ಹಿರಿಸಾವೆಗೆ ನೇರ ಬಸ್ ಸಂಪರ್ಕ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ; ಇದು ಮೈಸೂರು ಮತ್ತು ರಾಷ್ಟ್ರೀಯ ಹೆದ್ದಾರಿ ೪೮ (೭೫) ನ್ನು ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆ ಹಾಗೂ ಸಮೀಪದ ರಸ್ತೆ ಆಗಿದ್ದು, ಈ ಮಾರ್ಗವಲ್ಲಿ ಸೂಕ್ತ ಬಸ್ ವ್ಯವಸ್ಥೆ ಕಲ್ಪಿಸುವುದರಿಂದ ೩ ಜಿಲ್ಲೆಗಳ ಗ್ರಾಮೀಣ ಪ್ರದೇಶದ ಜನತೆಗೆ ಅನುಕೂಲ ಆಗುವುದಿಲ್ಲವೇ ;

(ಆ) ಮೈಸೂರುನಿಂದ ಇದೇ ಮಾರ್ಗದಲ್ಲಿ ಹಿರಿಸಾವೆ-ನೊಣವಿನ ಕೆರೆ ಮೂಲಕ ತಿಪಟೂರಿಗೆ ನೇರ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಮೇಲುಕೋಟೆಯಿಂದ ಶ್ರವಣಬೆಳಗೊಳ, ಹಾಸನ, ಬೇಲೂರು ಮತ್ತು ಹಳೇಬೀಡುಗಳಿಗೆ ಮತ್ತು ಮೇಲುಕೋಟೆಯಿಂದ ಬಿಳಿಗಿರಿರಂಗನ ಬೆಟ್ಟಕ್ಕೆ ನೇರ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ; ಇದು ಪ್ರವಾಸಿ ಮಾರ್ಗವಾಗಿದ್ದು ಹೆಚ್ಚಿನ ಸಂಖ್ಯೆಯ ಪ್ರವಾಸಿಗರು ಬೇಲೂರು-ಹಳೇಬೀಡು-ಶ್ರವಣಬೆಳಗೊಳ ಮತ್ತು ಮೇಲುಕೋಟೆ ನಡುವೆ ಸಂಚರಿಸಲು ಉಪಯುಕ್ತವಾದ, ಸಮೀಪವಾದ ಈ ಮಾರ್ಗದಲ್ಲಿ ಬಸ್ ಓಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಸಕಲೇಶಪುರದಲ್ಲಿ ಬಸ್ ತಂಗುದಾಣ ನಿರ್ಮಾಣ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೬೦ (೩೩೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಕಲೇಶಪುರ ನಗರದಲ್ಲಿ ಹಾಲಿ ಇರುವ ಬಸ್ ತಂಗುದಾಣಗಳೆಷ್ಟು ;

(ಆ) ಮಲೆನಾಡು ಕೇಂದ್ರ ಸ್ಥಳವಾದ ಸಕಲೇಶಪುರದಲ್ಲಿ ಹಾಲಿ ಇರುವ ಬಸ್ ತಂಗುದಾಣಗಳು ಸಾಕಾಗುತ್ತವೆಯೇ ;

(ಇ) ಸಕಲೇಶಪುರ ನಗರದಲ್ಲಿ ಅಗತ್ಯವಿರುವ ಕಡೆ ನಗರ ಸಾರಿಗೆ ಮತ್ತು ಕೆ.ಎಸ್.ಆರ್.ಟಿ.ಸಿ. ಬಸ್ ತಂಗುದಾಣ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗಂಗಾ ಕಲ್ಯಾಣ ಯೋಜನೆಯಡಿ ಕೊರೆದ ಕೊಳವೆ ಬಾವಿಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೬೧ (೩೩೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು (೩) ವರ್ಷಗಳಲ್ಲಿ ಬೆಳಗಾಂ ಜಿಲ್ಲೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಇದೇ ಅವಧಿಯಲ್ಲಿ ಈ ಯೋಜನೆಯಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ;

(ಇ) ವಿಫಲ ಮತ್ತು ಸಫಲವಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ?

## ವೈದ್ಯಕೀಯ ಕಾಲೇಜುಗಳು ಮತ್ತು ಸಂಬಂಧಿಸಿದ ಆಸ್ಪತ್ರೆಗಳು

**ಡಾ: ಎಂ. ಆರ್. ಹುಲಿನಾಯ್ಕರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೨೬೨ (೩೪೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ಮೆಡಿಕಲ್ ಕಾಲೇಜುಗಳು ಮತ್ತು ಅವುಗಳಿಗೆ ಸಂಬಂಧಿಸಿದ ಆಸ್ಪತ್ರೆಗಳಿವೆ ; (Attached to medical colleges)

(ಆ) ಪ್ರತಿ ವರ್ಷ ಪ್ರತಿ ಕಾಲೇಜು ಮತ್ತು ಸಂಬಂಧಿಸಿದ ಆಸ್ಪತ್ರೆ ಸೇರಿ ನಿಗದಿಪಡಿಸಿದ ವಾರ್ಷಿಕ ಬಜೆಟ್ ಎಷ್ಟು ; (ವಿವರ ಕೊಡುವುದು)

(ಇ) ಈ ಆಸ್ಪತ್ರೆ ಮತ್ತು ಕಾಲೇಜಿನಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು (ಕಾಲೇಜುವಾರು) ;

(ಈ) ಪ್ರತಿ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಭರಿಸುವ ಖರ್ಚು ಎಷ್ಟು ?

## ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ):–**

೨೬೩ (೩೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ಬಿಜಾಪುರ ಜಿಲ್ಲೆ ಹಾಗೂ ತಾಲ್ಲೂಕಿನ, ಕತ್ನಳ್ಳಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸ್ಥಾಪನೆಗೆ ಬೇಡಿಕೆ ಇದ್ದು ಈ ಬಗ್ಗೆ ಸರ್ಕಾರ ಕ್ರಮ ವಹಿಸುವುದೇ ?

## ಬ್ಯಾಕ್ ಲಾಗ್ ಹುದ್ದೆಗಳು ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಶಿಕ್ಷಕರು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-**

೨೬೪ (೩೫೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಎಲ್ಲಾ ಇಲಾಖೆಗಳಲ್ಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ೨೦೧೩-೧೪ನೇ ಸಾಲಿನಿಂದ ಇಲ್ಲಿಯುವರೆಗೂ ಭರ್ತಿ ಮಾಡಿಕೊಳ್ಳಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಖಾಲಿಯಿರುವ ಹುದ್ದೆಗಳೆಷ್ಟು ;

(ಇ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿ ನಡೆಯುವ ಶಾಲೆಗಳ ಶಿಕ್ಷಕರ ಸಂಖ್ಯೆ ಎಷ್ಟು ;

(ಈ) ಇವರ ವರ್ಗಾವಣೆಗೆ ಇರುವ ನೀತಿಯೇನು ; ಎಷ್ಟು ಶಾಲೆಗಳನ್ನು ಈ ಸಂಘ ನಡೆಸುತ್ತಿದೆ ;

(ಉ) ಸಂಘದ ಕೇಂದ್ರ ಕಛೇರಿಯಲ್ಲಿ ಸೃಷ್ಟಿಯಾಗಿರುವ ಹುದ್ದೆಗಳು ಯಾವುವು ಮತ್ತು ಎಷ್ಟು ; ಖಾಲಿಯಿರುವ ಹುದ್ದೆಗಳು ಎಷ್ಟು ?

## ಅನ್ನಭಾಗ್ಯ ಯೋಜನೆ ಮತ್ತು ಪಡಿತರ ಚೀಟಿ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):-**

೨೬೫ (೩೪೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ :-

(ಅ) ಬೆಳಗಾವಿ ಜಿಲ್ಲೆಯ ಚಿಕ್ಕೋಡಿ, ರಾಯಬಾಗ, ಅಥಣಿ ತಾಲ್ಲೂಕಿನ ಹಾಗೂ ಜಿಲ್ಲೆಯ ಅನೇಕ ಕಡು ಬಡವರಿಗೆ ಬಿ.ಪಿ.ಎಲ್.

ಕಾರ್ಡ್‌ಗಳು ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅರ್ಹ ಕಡು ಬಡವರು ಅರ್ಜಿ ಸಲ್ಲಿಸಿದ್ದರೂ ಕೂಡಾ ಇನ್ನೂವರೆಗೆ ಕಾರ್ಡ್‌ಗಳು ವಿಲೇವಾರಿ ಆಗದೆ ಇರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಜಿಲ್ಲೆಯ ಚಿಲ್ಲೋಡಿ, ಅಥಣಿ, ರಾಯಬಾಗ ಹಾಗೂ ಇನ್ನೂಳಿದ ಏಳು (೭) ತಾಲ್ಲೂಕುಗಳಲ್ಲಿ ಬಿ.ಪಿ.ಎಲ್ ಕಾರ್ಡ್‌ಗಳು ಹಾಗೂ ಎ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಗೂ ಗ್ರಾಮವಾರು ವಿವರ ನೀಡುವುದು) ;

(ಈ) ಈಗಾಗಲೇ ಕಾರ್ಡ್ ಸಿಗದೇ ಇರುವವರು ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಗೂ ಗ್ರಾಮವಾರು ವಿವರ ನೀಡುವುದು) ;

(ಉ) ಸದರಿ ಕಾರ್ಡ್‌ಗಳ ವಿಲೇವಾರಿ ಎಷ್ಟು ದಿನಗಳಲ್ಲಿ ಕೈಗೊಳ್ಳಲಾಗುವುದು ;

(ಊ) ಇದರಿಂದ ಅನ್ನಭಾಗ್ಯ ಯೋಜನೆ ಸುಗಮವಾಗಿ ಬಡವರಿಗೆ ತಲುಪಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ೨೦೦೬ ರಿಂದ ೨೦೧೧ ರವರೆಗೆ ರಾಜ್ಯದಲ್ಲಿ ಪಡಿತರ ಚೀಟಿ ವಿತರಣೆ ಗುತ್ತಿಗೆ ಪಡೆದ "ಕೋಮ್ಯಾಟ್ ಕಂಪನಿ" ಯಿಂದ ಆದ ಅಕ್ರಮ ರೇಷನ್ ಕಾರ್ಡ್ ವಿತರಣೆ ಬಗ್ಗೆ "ಕೋಮ್ಯಾಟ್ ಕಂಪನಿ" ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಆರೋಗ್ಯ ಕೇಂದ್ರಗಳು ಮತ್ತು ವೈದ್ಯರುಗಳು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೬೬ (೩೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಒಟ್ಟು ರಾಜ್ಯದಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳು ಎಷ್ಟು ;

(ಇ) ಇಂತಹ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಈ) ಈ ಹುದ್ದೆಗಳನ್ನು ಯಾವ ಕಾಲ ಮಿತಿಯಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ರಾಜ್ಯದಲ್ಲಿರುವ ಜಿಲ್ಲಾ ಆಸ್ಪತ್ರೆಗಳಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಜನಸಂಖ್ಯೆ ಆಧಾರದ ಮೇಲೆ ತೀವ್ರ ನಿಗಾಘಟಕಗಳಲ್ಲಿ (ಐ.ಸಿ.ಯು) ಹಾಸಿಗೆಗಳ ಸೌಲಭ್ಯ ಒದಗಿಸಲಾಗಿದೆಯೇ ;

(ಊ) ಹಾಗಿದ್ದಲ್ಲಿ, ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಎಷ್ಟು (ಐ.ಸಿ.ಯು) ಹಾಸಿಗೆಗಳ ವ್ಯವಸ್ಥೆ ಇರಬೇಕು (ಜಿಲ್ಲಾವಾರು ಮಾಹಿತಿ ನೀಡುವುದು) ;

(೨ಋ) ರಾಜ್ಯದಲ್ಲಿ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯನ್ನು ನಗರ ಪ್ರದೇಶದಲ್ಲಿ ವಾಸಿಸುವ ಜನರಿಗೆ ವಿಸ್ತರಿಸಿದ್ದು, ಈ ಯೋಜನೆಯ ಪ್ರಯೋಜನ ಪಡೆಯಲು ಸರ್ಕಾರ ವಿಧಿಸುವ ನಿಬಂಧನೆಗಳೇನು ;

(೨ೠ) ರಾಜ್ಯದ ನಗರ ಪ್ರದೇಶದಲ್ಲಿರುವ ಜನರು ಈ ಯೋಜನೆಯ ಪ್ರಯೋಜನ ಪಡೆಯಲು ಸರ್ಕಾರ ಪ್ರಚಾರ ಮಾಡಿದೆಯೇ ; ಸದರಿ ವಿಮಾ ಯೊಜನೆಗೆ ಸಾರ್ವಜನಿಕರು ಭರಿಸಲಿರುವ ವಿಮಾ ಕಂತು ಸಾಮಾನ್ಯ ಬಡವರಿಗೆ ಹೊರೆಯಾಗುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಪರಿಹರಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

**ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಹಾಸಿಗೆಗಳ ಸೌಲಭ್ಯ**

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೬೭ (೩೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ಜಿಲ್ಲಾ ಆಸ್ಪತ್ರೆಗಳಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಜನಸಂಖ್ಯಾ ಆಧಾರದ ಮೇಲೆ ತೀವ್ರ ನಿಗಾ ಘಟಕಗಳಲ್ಲಿ (ಐ.ಸಿ.ಯು) ಹಾಸಿಗೆಗಳ ಸೌಲಭ್ಯ ಒದಗಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯೂ.ಎಚ್.ಓ) ಪ್ರಕಾರ ತೀವ್ರ ನಿಗಾ ಘಟಕಗಳಲ್ಲಿ ಎಷ್ಟು ಹಾಸಿಗೆಗಳ ವ್ಯವಸ್ಥೆ ಸೌಲಭ್ಯ ಇರಬೇಕು ; (ಜಿಲ್ಲಾವಾರು ಮಾಹಿತಿ ನೀಡುವುದು) ?

## ಸರ್ಕಾರಿ ವೈದ್ಯರ ಕೊರತೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೨೬೮(೩೪೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅದನ್ನು ತುಂಬಲು ಇಲಾಖೆ ಕೈಗೊಂಡಿರುವ ಕ್ರಮವೇನು ; (ಮಾಹಿತಿ ಒದಗಿಸುವುದು) ;

(ಇ) ಸದರಿ ಜಿಲ್ಲೆಗಳಲ್ಲಿ ಮಂಜೂರಾಗಿರುವ ವೈದ್ಯಾಧಿಕಾರಿಗಳ ಹುದ್ದೆಗಳ ಸಂಖ್ಯೆ ಎಷ್ಟು ; ಹಾಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು) ?

## ಪ್ರಾಥಮಿಕ ಆರೋಗ್ಯ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೨೬೯(೩೪೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು ; ಮತ್ತು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಸದರಿ ಜಿಲ್ಲೆಗಳಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಗಳೆಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಇ) ಜಿಲ್ಲೆಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಿಗೆ ಮಂಜೂರಾತಿಯಾದ ವಿವಿಧ ದರ್ಜೆಯ ಹುದ್ದೆಗಳೆಷ್ಟು ; ಅವು ಯಾವುವು ; (ಆರೋಗ್ಯ ಕೇಂದ್ರವಾರು, ಹುದ್ದೆ ಮಂಜೂರಾತಿಯಾದ ವರ್ಷದೊಂದಿಗೆ ವಿವರ ನೀಡುವುದು) ಕೊರತೆ ಇರುವ ಹುದ್ದೆಗಳೆಷ್ಟು ಮತ್ತು ಯಾವುವು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೆಷ್ಟು (ಆರೋಗ್ಯ ಕೇಂದ್ರವಾರು, ತಾಲ್ಲೂಕುವಾರು ವಿವರ ನೀಡುವುದು) ?

## ಅನ್ನಭಾಗ್ಯ ಯೋಜನೆಯ ಪರಿಣಾಮಕಾರಿ ಅನುಷ್ಠಾನ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):-**

೨೭೦(೩೫೦) ಮಾನ್ಯ ಆಹಾರ, ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯು ಪರಿಣಾಮಕಾರಿಯಾಗಿ ಅನುಷ್ಠಾನವಾಗಲು ಮತ್ತು ಫಲಾನುಭವಿಗಳು ಅದರ ಪ್ರಯೋಜನ ಪಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಉಡುಪಿ ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯಡಿಯಲ್ಲಿ ವಿತರಣೆಯಾಗುತ್ತಿರುವ ಕುಚ್ಚಲು ಅಕ್ಕಿಯು ಕಳಪೆ ಗುಣಮಟ್ಟದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಐ.ಟಿ. ಪಾರ್ಕ್ ಹೊಂದಿರುವ ಜಿಲ್ಲೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):-**

೨೭೧ (೩೪೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಐ.ಟಿ. ಪಾರ್ಕ್ ಹೊಂದಿರುವ ಜಿಲ್ಲೆಗಳು ಯಾವುವು ; ಮತ್ತು ಅವುಗಳನ್ನು ನಿರ್ಮಿಸಲು ತಗುಲಿದ ಒಟ್ಟು ವೆಚ್ಚವೆಷ್ಟು ; ಈ ಐ.ಟಿ. ಪಾರ್ಕ್‌ಗಳಿಂದ ಸರ್ಕಾರಕ್ಕೆ ಬರುವ ವಾರ್ಷಿಕ ಆದಾಯವೆಷ್ಟು ?

(ಆ) ಉಡುಪಿ ಜಿಲ್ಲೆಯಲ್ಲಿ ಐ.ಟಿ. ಪಾರ್ಕ್ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ;ಇಲ್ಲವಾದಲ್ಲಿ ಕಾರಣವೇನು ?

## ಸರ್ಕಾರಿ ವೈದ್ಯಕೀಯ ಕಾಲೇಜುಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):-**

೨೭೨ (೩೫೧) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; ಮತ್ತು ಯಾವುವು ; ಅವುಗಳು ಪ್ರಾರಂಭವಾದ ವರ್ಷ ಯಾವುದು ;

(ಆ) ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜು ಇಲ್ಲದೇ ಇರತಕ್ಕಂತಹ ಜಿಲ್ಲೆಗಳು ಯಾವುವು ; ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಹೊಸದಾಗಿ ಕಾಲೇಜುಗಳನ್ನು

ತೆರೆಯುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಕಾರಣವೇನು ?

## ಪಡಿತರ ವ್ಯವಸ್ಥೆಯಲ್ಲಿ ಎಸ್‌ಎಂಎಸ್ ಪಾತ್ರ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೭೩ (೩೫೮) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಡಿತರ ವ್ಯವಸ್ಥೆಗೆ ನೂತನವಾಗಿ ಎಸ್‌ಎಂಎಸ್ ಕಡ್ಡಾಯ ಮಾಡಿ ಆದೇಶ ಹೊರಡಿಸಿರುವುದು ನಿಜವೇ;

(ಆ) ಎಸ್‌ಎಂಎಸ್ ಮೂಲಕ ಪಡಿತರ ಪಡೆದುಕೊಳ್ಳಲು ಹೊಸ ಮಾನದಂಡವೇನು;

(ಇ) ಇದರಿಂದ ಗ್ರಾಹಕರಿಗೆ ಯಾವ ರೀತಿ ಅನುಕೂಲವಾಗಲಿದೆ; (ಪೂರ್ಣ ವಿವರ ಕೊಡುವುದು)

(ಈ) ಇದರಿಂದ ಅನುಕೂಲಕ್ಕಿಂತ ಅನಾನುಕೂಲ ಜಾಸ್ತಿ ಎಂದು ದೂರುಗಳು ಬಂದಿರುವುದು ನಿಜವೇ?

## ಸ್ಲೀಪರ್ ಕೋಚ್ ಬಸ್ಸುಗಳ ಸೇವೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೭೪ (೩೫೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನಿಂದ ರಾಜ್ಯದ ಪ್ರಮುಖ ನಗರಗಳಿಗೆ ಪ್ರತಿದಿವಸ ಹೋಗುತ್ತಿರುವ ಹಾಗೂ ಬರುತ್ತಿರುವ ಸ್ಲೀಪರ್‌ಕೋಚ್ ಬಸ್ಸುಗಳ ಸಂಖ್ಯೆ ಎಷ್ಟು ;

(ಆ) ಪ್ರತಿ ದಿವಸ ಯಾವ ಯಾವ ನಗರಗಳಿಗೆ ಯಾವ ವೇಳೆಯಲ್ಲಿ ಬೆಂಗಳೂರು ನಗರದಿಂದ ಹೊರಡುತ್ತವೆ ; ಮತ್ತು ಆ ಸ್ಥಳದಿಂದ ಯಾವಾಗ ಹೊರಡುತ್ತವೆ ;

(ಇ) ಇದರಲ್ಲಿ ಹವಾ ನಿಯಂತ್ರಿತ ಬಸ್‌ಗಳಾವುವು ; ಹವಾ ನಿಯಂತ್ರಿತವಲ್ಲದ ಬಸ್‌ಗಳಾವುವು;

(ಈ) ರಾತ್ರಿ ವೇಳೆ ಪ್ರಯಾಣ ಮಾಡುವ ಸ್ಲೀಪರ್ ಬಸ್ಸುಗಳ ಸ್ಥಿತಿಗತಿ ಹೇಗಿದೆ;

(ಉ) ಪ್ರಯಾಣಿಕರಿಗೆ ತೊಂದರೆಯಾಗದಂತೆ ಇಲಾಖೆ ತೆಗೆದುಕೊಂಡಿರುವ ಕ್ರಮವೇನು?

## ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೭೫ (೩೫೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೆಡಿಕಲ್ ಕಾಲೇಜುಗಳ ಸಂಖ್ಯೆ ಎಷ್ಟು; ಸರ್ಕಾರಿ ಹಾಗೂ ಖಾಸಗಿ ಮೆಡಿಕಲ್ ಕಾಲೇಜುಗಳ ಪ್ರತ್ಯೇಕ ಜಿಲ್ಲಾವಾರು ವಿವರ ನೀಡುವುದು ;

(ಆ) ಸರ್ಕಾರಿ ಹಾಗೂ ಖಾಸಗಿ ಮೆಡಿಕಲ್ ಕಾಲೇಜುಗಳಲ್ಲಿ ಪ್ರಸಕ್ತ ವರ್ಷದಲ್ಲಿ ಲಭ್ಯವಿರುವ ಸೀಟುಗಳ ಸಂಖ್ಯೆ ಎಷ್ಟು ; (ಕಾಲೇಜುವಾರು ಮಾಹಿತಿ ನೀಡುವುದು)

(ಇ) ಮೆಡಿಕಲ್ ಸೀಟು ಪಡೆಯಲು ಇರುವ ಮಾನದಂಡವೇನು?

## ಹೊಸ ಆಸ್ಪತ್ರೆಗಳನ್ನು ಪ್ರಾರಂಭಿಸುವುದು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೭೬ (೩೫೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ಆಸ್ಪತ್ರೆಗಳನ್ನು ಪ್ರಾರಂಭಮಾಡಲು ಬೇಡಿಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರದ ನಿಲುವೇನು;

(ಇ) ಹಿಂದೆ ಮಂಜೂರು ಮಾಡಿರುವ ಕೆಲವು ಆಸ್ಪತ್ರೆಗಳನ್ನು ಪ್ರಾರಂಭ ಮಾಡದಿರಲು ಕಾರಣವೇನು; ಅವು ಎಲ್ಲೆಲ್ಲಿ ಮತ್ತು ಯಾವುವು;

(ಈ) ಹಾಗಿದ್ದಲ್ಲಿ ಬೇಡಿಕೆ ಇರುವ ಕಡೆಗೆ ಸ್ಥಳಾಂತರಿಸಲು ಇರುವ ತೊಂದರೆಯಾದರೂ ಏನು; ಸರ್ಕಾರ ಈ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಳ್ಳುವುದು?

## ಬೆಳಗಾವಿ ಜಿಲ್ಲಾ ಆಸ್ಪತ್ರೆಗೆ ಸಿ.ಟಿ. ಸ್ಕ್ಯಾನ್ ಒದಗಿಸುವ ಬಗ್ಗೆ ಹಾಗೂ ಮೂಲಭೂತ ಸೌಲಭ್ಯಗಳು ಇಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ತಪ್ಪಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :–**

೨೭೭ (೩೮೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲಾ ಆಸ್ಪತ್ರೆಗೆ ದಿನನಿತ್ಯ ಜಿಲ್ಲೆಯ ನಾನಾ ಭಾಗಗಳಿಂದ ಆಗಮಿಸುವ ನೂರಾರು ಒಳ ಹಾಗೂ ಹೊರ ರೋಗಿಗಳ

ಜನಸಂದಣಿ ಹೆಚ್ಚಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಸರಾಸರಿ ಒಳರೋಗಿ ಹಾಗೂ ಹೊರ ರೋಗಿಗಳ ಸಂಖ್ಯೆ ಒದಗಿಸುವುದು;

(ಆ) ಈ ಆಸ್ಪತ್ರೆಯಲ್ಲಿ ವೈದ್ಯಕೀಯ ಉಪಕರಣಗಳ ಕೊರತೆ ಇರುವುದು ನಿಜವೇ; ಹಾಗಿದ್ದಲ್ಲಿ, ಒದಗಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಸಿ.ಟಿ. ಸ್ಕ್ಯಾನ್ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ;

(ಈ) ಬೆಳಗಾಂವ ಬೀಮ್ಸ್ ಅಡಿ ಒಂದು ಅತ್ಯುತ್ತಮ ದರ್ಜೆಯ ೨೫೦ ಹಾಸಿಗೆಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ;

(ಉ) ಆಸ್ಪತ್ರೆ ಸುಧಾರಿಸಲು ಯಾವ ಕ್ರಮ ಹಮ್ಮಿಕೊಳ್ಳಲಾಗಿದೆ; ಹಾಗೂ ಅಭಿವೃದ್ಧಿ ಸಲುವಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ;

(ಊ) ಸಿಬ್ಬಂದಿ ಕೊರತೆ ಹೋಗಲಾಡಿಸಲು ಕ್ರಮ ಕೈಗೊಳ್ಳಲಾಗುವುದೇ; ಯಾವ-ಯಾವ ವಿಭಾಗದಲ್ಲಿ (Teaching & Non Teaching) ಎಷ್ಟೆಷ್ಟು ಹುದ್ದೆಗಳು ಖಾಲಿ ಇರುತ್ತವೆ; ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಋ) ಆಸ್ಪತ್ರೆ ಸುಧಾರಿಸಲು ಐದು ನೂರು ಕೋಟಿ ರೂ. ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

## ಅಕ್ಕಿ ಮೇಲಿನ ಲೆವಿ ಪದ್ಧತಿ ರದ್ಧತಿ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :–**

೨೭೮ (೩೬೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಕ್ಕಿ ಲೆವಿಯನ್ನು ತೆಗೆಯಲು ರಾಜ್ಯ ಸರ್ಕಾರ ಮುಂದಾಗಿರುವ ಸಂಗತಿ ನಿಜವೇ;

(ಆ) ಮುಕ್ತ ಮಾರುಕಟ್ಟೆಯಲ್ಲಿಯೇ ಭತ್ತವನ್ನು ಖರೀದಿ ಮಾಡಿ ಸರ್ಕಾರವೇ ಗಿರಣಿ ಮಾಡಿಸಿ ದಾಸ್ತಾನು ಮಾಡಿಕೊಳ್ಳುವ ಯೋಚನೆ ಸರ್ಕಾರದ ಮುಂದಿದೆಯೇ; (ಇದರ ಸಾಧಕ–ಭಾದಕಗಳೇನು)

(ಇ) ನೇರವಾಗಿ ಭತ್ತ ಖರೀದಿ ಮಾಡುವುದರಿಂದ ಗಿರಣಿ ಮಾಲೀಕರಿಗೆ ಹಾನಿಯಾಗುವುದಿಲ್ಲವೇ; ಹಾಗೂ ಈ ಉದ್ದಿಮೆಗಳು ಮುಚ್ಚುವ ವ್ಯವಸ್ಥೆ ಆಗುವುದಿಲ್ಲವೆ;

(ಈ) ಬೇರೆ ಯಾವುದಾದರೂ ರಾಜ್ಯಗಳಲ್ಲಿ ನೇರವಾಗಿ ರೈತರ ಕಡೆಯಿಂದ ಭತ್ತ ಖರೀದಿ ಮಾಡಿ, ಸಂಗ್ರಹಿಸಿ, ಅಕ್ಕಿ ಮಾಡಿಸಿ, ಫಲಾನುಭವಿಗಳಿಗೆ ಹಂಚುವ ವ್ಯವಸ್ಥೆ ಇದೆಯೇ; ಆ ರಾಜ್ಯಗಳಲ್ಲಿ ಈ ಪದ್ಧತಿ ಯಶಸ್ವಿಯಾಗಿರುವುದೇ;

(ಉ) ಲೆವಿ ಪದ್ಧತಿ ಎಂದರೇನು ? (ಇದರ ಪೂರ್ಣ ವಿವರ ನೀಡುವುದು)

## ಅಸಹಜ ಸಾವಿನ ಮೃತದೇಹಗಳ ಮರಣೋತ್ತರ ಪರೀಕ್ಷೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) :-**

೨೭೯ (೩೬೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಅಸಹಜ ಸಾವಿನ ಮೃತದೇಹಗಳ ಮರಣೋತ್ತರ ಪರೀಕ್ಷೆಗೆ ವಿನಾಕಾರಣ ಅಸಹಕಾರ ವ್ಯಕ್ತಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವೈದ್ಯಾಧಿಕಾರಿಗಳ ವಿನಾಕಾರಣ ಅಸಹಕಾರಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಆ) ಮರಣೋತ್ತರ ಪರೀಕ್ಷೆಗೆ ವೈದ್ಯಾಧಿಕಾರಿಗಳ ಅಸಹಕಾರದಿಂದ ಶವಸಂಸ್ಕಾರಕ್ಕೆ ಹಾಗೂ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಮರಣೋತ್ತರ ಪರೀಕ್ಷೆ ನಡೆಸಲು ಇಲಾಖೆಯಲ್ಲಿ ರೂಪಿಸಿರುವ ನಿಯಮಗಳೇನು ; (ವಿವರ ನೀಡುವುದು)

(ಈ) ಈ ಸಮಸ್ಯೆಗೆ ಪರಿಹಾರ ಒದಗಿಸಲು ಸರ್ಕಾರ ಯಾವ ಕಾಲಮಿತಿಯಲ್ಲಿ ಯಾವ ಕ್ರಮ ಕೈಗೊಳ್ಳುತ್ತದೆ?

## ಜಯನಗರ ಜನರಲ್ ಆಸ್ಪತ್ರೆಯಲ್ಲಿ ಶುಶ್ರೂಷಕರ ಕರ್ತವ್ಯ ನಿರ್ವಹಣೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) :–**

೨೮೦ (೩೬೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಜಯನಗರ ಜನರಲ್ ಆಸ್ಪತ್ರೆಯಲ್ಲಿ ಶುಶ್ರೂಷಕ ಸೂಪರಿಂಟೆಂಡೆಂಟ್ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರು ಕಳೆದ ಎಷ್ಟು ವರ್ಷಗಳಿಂದ ಸದರಿ ಆಸ್ಪತ್ರೆಯಲ್ಲಿಯೇ ಕರ್ತವ್ಯ ನಿರ್ವಹಿಸುತ್ತಿದ್ದಾರೆ; ಅವರಿಗೆ ನೀಡಿರುವ ಮುಂಬಡ್ತಿಗಳ ವಿವರ ನೀಡುವುದು ;

(ಆ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇವರ ವಿರುದ್ಧ ನಡೆಯುತ್ತಿರುವ ಇಲಾಖಾ ವಿಚಾರಣೆಗಳು ಯಾವುವು; ಈ ವಿಚಾರಣೆಗಳು ಯಾವ ಹಂತದಲ್ಲಿವೆ ; (ವಿವರ ನೀಡುವುದು)

(ಇ) ಜಯನಗರ ಜನರಲ್ ಆಸ್ಪತ್ರೆಯಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು ಸ್ಟಾಫ್ ನರ್ಸ್‌ಗಳ ಸಂಖ್ಯೆ ಎಷ್ಟು; ಈ ಪೈಕಿ ಐ.ಸಿ.ಯು. ನಲ್ಲಿ ಐಸಿಯು ಯಂತ್ರವನ್ನು ನಡೆಸಲು ತರಬೇತಿ ಪಡೆದಿರುವವರ ಸಂಖ್ಯೆ ಎಷ್ಟು; ತರಬೇತಿ ಪಡೆಯದಿರುವ ಸ್ಟಾಫ್ ನರ್ಸ್‌ಗಳ ಸಂಖ್ಯೆ ಎಷ್ಟು; ತರಬೇತಿ ಹೊಂದದ ಸ್ಟಾಫ್ ನರ್ಸ್‌ಗಳು ಈ ಯಂತ್ರವನ್ನು ನಡೆಸುತ್ತಿದ್ದು, ರೋಗಿಗಳ ಜೀವದೊಂದಿಗೆ

ಚೆಲ್ಲಾಟವಾಡುತ್ತಿರುವುದರಿಂದ ಶುಶ್ರೂಷಕ ಅಧೀಕ್ಷಕಿಯವರನ್ನು ನೇರ ಹೊಣೆ ಮಾಡಲಾಗುವುದೇ; (ಹೆಸರು ಸಮೇತ ಪೂರ್ಣ ವಿವರ ನೀಡುವುದು)

(ಈ) ಇಲ್ಲಿರುವ ಸ್ಟಾಫ್ ನರ್ಸ್‌ಗಳಿಗೆ ರೊಟೇಷನ್ ಪ್ರಕಾರ ಪಾಳಿ ಕರ್ತವ್ಯ ಹಂಚಿಕೆ ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ ಕಾರಣವೇನು; ರೊಟೇಷನ್ ಮಾಡಿದ್ದಲ್ಲಿ ಕಳೆದ ಎರಡು ವರ್ಷಗಳ ವಿವರ ನೀಡುವುದು; ಉದ್ದೇಶಪೂರ್ವಕವಾಗಿ ಕೆಲವರಿಗೆ ರೊಟೇಷನ್ ಪದ್ಧತಿ ಅಳವಡಿಸದೇ ಐ.ಸಿ.ಯು ವಿಭಾಗಕ್ಕೂ ಸಹ ವರ್ಗಾಯಿಸದೇ ಕಿರುಕುಳ ನೀಡುತ್ತಿರುವುದು ನಿಜವೇ? (ವಿವರ ನೀಡುವುದು)

## ಕೊಪ್ಪಳ ಜಿಲ್ಲೆಯಲ್ಲಿರುವ ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳಿಗೆ ಮಂಜೂರಾದ ಹುದ್ದೆಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೮೧ (೩೬೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಮಂಜೂರು ಆಗಿರುವ ಹುದ್ದೆಗಳು ಎಷ್ಟು; ಅವುಗಳಲ್ಲಿ ಖಾಲಿ ಇರುವ ಮತ್ತು ಭರ್ತಿಯಾಗಿರುವ ಹುದ್ದೆಗಳ ವಿವರಗಳನ್ನು ನೀಡುವುದು;

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ೨೦೧೩-೧೪ ಮತ್ತು ೨೦೧೪-೧೫ ನೇ ಸಾಲಿನಲ್ಲಿ ಪ್ರತಿ ಸಾರ್ವಜನಿಕ ಆಸ್ಪತ್ರೆಗಳಿಗೆ ಸರ್ಕಾರ ನೀಡಿದ ಅನುದಾನ ವಿವರಗಳನ್ನು ನೀಡುವುದು;

(ಈ) ಸದರಿ ಅನುದಾನದಲ್ಲಿ ಔಷಧ ಖರೀದಿ ಮಾಡಲು ಅವಕಾಶವಿದೆಯೇ ಅಥವಾ ಔಷಧ ಸಾಮಗ್ರಿಗಳನ್ನು ನೇರವಾಗಿ ಸರ್ಕಾರವೇ ಪೂರೈಸುತ್ತಿದೆಯೇ;

(ಉ) ಆಸ್ಪತ್ರೆಗಳಲ್ಲಿ ಲಭ್ಯವಾಗದಂತಹ ಅತೀ ಅವಶ್ಯಕ ಔಷಧಗಳು ಏನಾದರೂ ಇವೆಯೇ; ಇದ್ದಲ್ಲಿ ಅಂತಹ ಔಷಧಗಳನ್ನು ಪೂರೈಸಲು ಇಲಾಖೆಯವರು ಕೈಗೊಂಡ ಕ್ರಮಗಳೇನು;

(ಊ) ಸದರಿ ಜಿಲ್ಲೆಯಲ್ಲಿ ಔಷಧಗಳನ್ನು ಖಾಸಗಿ ಅಂಗಡಿಗಳಿಂದ ತರುವಂತೆ ವೈದ್ಯರು ಸಾರ್ವಜನಿಕರಿಗೆ ತಾಕೀತು ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಋ) ಬಂದಿದ್ದಲ್ಲಿ, ಸರ್ಕಾರ ಈ ಕುರಿತು ಕೈಗೊಂಡ ಕ್ರಮಗಳೇನು?

**ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ನಿಲಯಗಳು**

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೮೨ (೩೬೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ವಸತಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಸ್ವಂತ ಕಟ್ಟಡವನ್ನು ಹೊಂದಿರುವ ಶಾಲೆಗಳು ಎಷ್ಟು; ಸ್ವಂತ ಕಟ್ಟಡ ಹೊಂದಿರದ ವಸತಿ ಶಾಲೆ/ವಸತಿ ನಿಲಯಗಳು ಎಷ್ಟು ;

(ಇ) ಬಾಡಿಗೆ ಕಟ್ಟಡದಲ್ಲಿರುವ ವಸತಿ ಶಾಲೆ/ವಸತಿ ನಿಲಯಗಳಿಗೆ ಸದ್ಯ ಪಾವತಿ ಮಾಡಲಾಗುತ್ತಿರುವ ಬಾಡಿಗೆ ಮೊತ್ತ ಎಷ್ಟು ; (ಪ್ರತ್ಯೇಕ ವಿವರಗಳನ್ನು ನೀಡುವುದು)

(ಈ) ಎಷ್ಟು ವಸತಿ ನಿಲಯ, ವಸತಿ ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ ;

(ಉ) ಕುಡಿಯುವ ನೀರಿನ ಸಮಸ್ಯೆ ಇರುವಂತಹ ವಸತಿ ಶಾಲೆ, ವಸತಿ ನಿಲಯಗಳು ಎಷ್ಟು ; ಇವುಗಳ ಸಮಸ್ಯೆ ನಿವಾರಣೆಗೆ ಕೈಗೊಂಡ ಕ್ರಮಗಳೇನು ?

## ಕೊಳವೆ ಬಾವಿಗಳು ಮತ್ತು ಅವುಗಳಿಗೆ ಪೂರೈಸಲಾದ ವಿದ್ಯುತ್ ಸಂಪರ್ಕ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೮೩ (೩೬೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿನ ಎಲ್ಲಾ ಅಭಿವೃದ್ಧಿ ನಿಗಮ/ಮಂಡಳಿಗಳಲ್ಲಿ ಕಳೆದ ಐದು ವರ್ಷಗಳಲ್ಲಿ ಮಂಜೂರು ಮಾಡಲಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಕೊಳವೆ ಬಾವಿಯನ್ನು ಕೊರೆಸಿದ ಪ್ರಕರಣಗಳು ಮತ್ತು ಕೊರೆಯಿಸದೇ ಬಾಕಿ ಇರುವ ಪ್ರಕರಣಗಳ ವಿವರಗಳನ್ನು ನೀಡುವುದು;

(ಇ) ಅವುಗಳಲ್ಲಿ ಫಲಾನುಭವಿಗಳಿಗೆ ಸಲಕರಣೆಗಳನ್ನು ವಿತರಿಸಲಾದ ಪ್ರಕರಣಗಳು ಎಷ್ಟು ; ಸಲಕರಣೆಗಳನ್ನು ವಿತರಿಸದೇ ಬಾಕಿ ಇರುವ ಪ್ರಕರಣಗಳು ಎಷ್ಟು ;

(ಈ) ವಿದ್ಯುಚ್ಛಕ್ತಿ ಸಂಪರ್ಕಗಳನ್ನು ಕಲ್ಪಿಸಿದ ಪ್ರಕರಣಗಳ ಸಂಖ್ಯೆ ಎಷ್ಟು; ಸಂಪರ್ಕ ಪಡೆಯದಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಬಾಕಿ ಉಳಿದಿರಲು ಕಾರಣವೇನು;

(ಉ) ವಿದ್ಯುತ್ ಸರಬರಾಜು ಕಂಪನಿಗಳಿಂದ ವಿಳಂಬವೇನಾದರೂ ಆಗುತ್ತಿದೆಯೇ; ಆಗುತ್ತಿದ್ದಲ್ಲಿ, ವಿಳಂಬವನ್ನು ತಪ್ಪಿಸಲು ಇಲಾಖೆಯವರು ಕೈಗೊಂಡ ಕ್ರಮಗಳೇನು?

**ಶಾಸಕರುಗಳಿಗೆ ಉಚಿತ ಬಸ್‌ಪಾಸ್ ನೀಡಿಕೆ**

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೮೪ (೩೬೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಧಾನ ಸಭೆಯು ಹಾಗೂ ವಿಧಾನ ಪರಿಷತ್ತಿನ ಎಲ್ಲ ಮಾನ್ಯ ಶಾಸಕರುಗಳಿಗೆ ಸರಕಾರ ಉಚಿತ ಬಸ್

ಸೌಲಭ್ಯ ನೀಡುತ್ತಿದ್ದು ಇದಕ್ಕಾಗಿ ಸರಕಾರ ಪ್ರಸಕ್ತ ಸಾಲಿನಲ್ಲಿ ತೆಗೆದಿರಿಸಿದ ಅನುದಾನ ಎಷ್ಟು ;

(ಆ) ಪ್ರಸಕ್ತ ಸಾಲಿನಲ್ಲಿ ಸಾರಿಗೆ ಇಲಾಖೆಗೆ ಪಾವತಿಸಲಾದ ಅನುದಾನ ಎಷ್ಟು ;

(ಇ) ಈ ಮೊದಲು ಮುಂಗಡವಾಗಿ ಸೀಟ್ ಕಾಯ್ದಿರಿಸಲು ಆಯಾ ಜಿಲ್ಲಾ ಕೇಂದ್ರಗಳಲ್ಲಿ ಅವಕಾಶವಿದ್ದು, ಈಗ ಆ ಪದ್ಧತಿಯನ್ನು ಬದಲಾಯಿಸಲು ಕಾರಣವೇನು ;

(ಈ) ಪ್ರಸ್ತುತ ಕ್ಷೇತ್ರದಿಂದ ಬೆಂಗಳೂರಿಗೆ ಪ್ರಯಾಣಿಸಬೇಕಾದರೂ ಬೆಂಗಳೂರಿನಲ್ಲಿರುವ ಶಾಸಕರ ಭವನದ ಸಾರಿಗೆ ಇಲಾಖೆಯ ಕೌಂಟರ್‌ನಿಂದಲೇ ಕಾಯ್ದಿರಿಸಬೇಕಾಗಿದೆ, ಇದರಿಂದ ಎಲ್ಲಾ ಶಾಸಕರಿಗೆ ಆಗುತ್ತಿರುವ ತೊಂದರೆಗಳ ಮನವರಿಕೆ ಸರಕಾರಕ್ಕೆ ಆಗಿದೆಯೇ;

(ಉ) ಸರಕಾರದ ಗಮನಕ್ಕೆ ಬಂದಿದ್ದಲ್ಲಿ, ಸದರಿ ಪದ್ಧತಿಯನ್ನು ಮುಂಚಿನ ಪದ್ಧತಿಗೆ ಬದಲಾಯಿಸಲು ಸರಕಾರ ಕ್ರಮ ಕೈಗೊಳ್ಳುವುದೇ ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿನಿಲಯಗಳ ಅಭಿವೃದ್ಧಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೮೫ (೩೭೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಹಿಂದುಳಿದ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿನಿಲಯಗಳಲ್ಲಿ ಯಾವುದೇ ಮೂಲಭೂತ ಸೌಲಭ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರವು ರೂಪಿಸಿರುವ ಯೋಜನೆಗಳಾವುವು; (ವಿಧಾನ ಸಭಾ ಕ್ಷೇತ್ರಾವಾರು ಮಾಹಿತಿ ನೀಡುವುದು)

(ಇ) ಸದರಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ನೀಡಿರುವ ದಾಖಲಾತಿಗಳೆಷ್ಟು ; (ಹಾಸ್ಟಲ್‌ವಾರು ವಿವರ ನೀಡುವುದು)

(ಈ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ (ಮಾಹಿತಿ ನೀಡುವುದು) ?

## ಅನ್ನಭಾಗ್ಯ ಯೋಜನೆಯ ಅನುಷ್ಠಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೮೬ (೩೮೭) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನ್ನಭಾಗ್ಯ ಯೋಜನೆಯನ್ನು ಎಂದಿನಿಂದ ಪ್ರಾರಂಭಿಸಲಾಗಿದೆ; ಈ ಯೋಜನೆಯ ಅನುಷ್ಠಾನಕ್ಕೆ ಕಳೆದ ಒಂದು ವರ್ಷದಿಂದ ಇಲ್ಲಿಯವರೆವಿಗೆ ಖರ್ಚು ಮಾಡಿರುವ ಹಣವೆಷ್ಟು;

(ಆ) ಈ ಯೋಜನೆಯಿಂದ ಎಷ್ಟು ಜನರಿಗೆ ಅನುಕೂಲವಾಗಿದೆ;

(ಇ) ಈ ಯೋಜನೆಯನ್ನು ದುರುಪಯೋಗ ಮಾಡುತ್ತಿರುವ ಎಷ್ಟು ಪ್ರಕರಣಗಳು ಇಲ್ಲಿಯವರೆವಿಗೆ ಪತ್ತೆಯಾಗಿವೆ;

(ಈ) ಈ ಯೋಜನೆಯಡಿಯಲ್ಲಿ ನೀಡಲಾಗುತ್ತಿರುವ ಕಡಿಮೆ ಬೆಲೆಯ ಅಕ್ಕಿಯನ್ನು ಅಕ್ರಮವಾಗಿ ಸಾಗಾಟ ಮಾಡಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಎಷ್ಟು ಪ್ರಕರಣಗಳು ಇಲ್ಲಿಯವರೆವಿಗೆ ಪತ್ತೆಯಾಗಿವೆ; ಈ ಬಗ್ಗೆ ಸಂಬಂಧಪಟ್ಟವರ ಮೇಲೆ ಕೈಗೊಂಡಿರುವ ಕ್ರಮಗಳೇನು ?

## ಜಿಲ್ಲಾ ಆಸ್ಪತ್ರೆಯಲ್ಲಿ ಅಕ್ರಮ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೮೭ (೩೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲಾ ಆಸ್ಪತ್ರೆಯಲ್ಲಿ ಕಳೆದ ೨೦೦೮ ರಿಂದ ೨೦೧೪ ಮೇ ತಿಂಗಳವರೆಗೆ ಬೀದರ್ ಜಿಲ್ಲಾ ತರಬೇತಿ ಕೇಂದ್ರಕ್ಕೆ ಸರ್ಕಾರವು ನೀಡಿರುವ ಹಣವೆಷ್ಟು; ಈ ಕೇಂದ್ರದಲ್ಲಿ ನಡೆದ ಅವ್ಯವಹಾರದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕಳೆದ ೬ ವರ್ಷಗಳಿಂದ ಪ್ರತಿ ವರ್ಷದಂತೆ ಎಷ್ಟು ಲೇಖನ ಸಾಮಗ್ರಿಗಳು, ಪ್ರಿಂಟಿಂಗ್, ಜೆರಾಕ್ಸ್ ಪ್ರತಿ ಪುಟಕ್ಕೆ, ಪ್ರತಿ ಪುಸ್ತಕ ಬೈಂಡಿಂಗ್ ಮಾಡಲು ಮತ್ತು ಬಣ್ಣದ ಮುಖ ಪುಟಕ್ಕೆ ಹಾಗೇ ಊಟ/ಉಪಚಾರ ಎಷ್ಟು ದರ ನಿಗದಿ ಮಾಡಲಾಗಿದೆ; (ವರ್ಷವಾರು ಮಾಹಿತಿ ನೀಡುವುದು)

(ಇ) ಈ ಲೇಖನ ಸಾಮಗ್ರಿಗಳನ್ನು ಎಷ್ಟು ಟೆಂಡರ್/ದರಪಟ್ಟಿ ಮುಖಾಂತರ ಎಷ್ಟು ದರದಲ್ಲಿ ಖರೀದಿ ಮಾಡಲಾಗಿದೆ; (ವಿವರ ನೀಡುವುದು) ಈ ಸಾಮಗ್ರಿಗಳನ್ನು ಖರೀದಿ ಮಾಡಿದ್ದಲ್ಲಿ, ಆ ಸಾಮಗ್ರಿಗಳ ಪಟ್ಟಿ ಮತ್ತು ಖರೀದಿಸಿದ ದಿನಾಂಕ, ರಸೀದಿ ಹಾಗೂ ಸಾಮಗ್ರಿಗಳನ್ನು ಪೂರೈಸಲು ಗುತ್ತಿಗೆ ಪಡೆದವರ ಹೆಸರು ಪ್ರತಿ ವರ್ಷದ ಮಾಹಿತಿ ನೀಡುವುದು ;

(ಈ) ಇಲ್ಲಿ ಅಕ್ರಮ ಕಂಡು ಬಂದಲ್ಲಿ ಈ ಅಧಿಕಾರಿಗಳ ವಿರುದ್ಧ ಕೂಡಲೇ ಯಾವ ಯಾವ ಕ್ರಮ ಕೈಗೊಳ್ಳಲಾಗುವುದು (ಮಾಹಿತಿ ನೀಡುವುದು)?

## ಅನ್ನಭಾಗ್ಯ ಯೋಜನೆಯಲ್ಲಿ ಅಕ್ರಮಗಳು

**ಶ್ರೀ ರಘನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೮೮ (೩೭೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯಡಿಯಲ್ಲಿ ಬಡಕುಟುಂಬದವರಿಗೆ ಒಂದು ರೂ.ಗೆ ಒಂದು ಕೆ.ಜಿ.ಅಕ್ಕಿ ಸಮರ್ಪಕವಾಗಿ ವಿತರಣೆಯಾಗುತ್ತಿದೆಯೇ ;

(ಆ) ಕಡುಬಡವರಿಗೆ ಸಲ್ಲಬೇಕಾದ ಈ ಯೋಜನೆಯ ಅಕ್ಕಿಯು ಬಡವರಿಗೆ ಸೇರದೇ ಹೋಟೆಲ್‌ಗಳಿಗೆ ಸೇರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಅಂತಹ ಪಡಿತರ ಅಂಗಡಿ ಮಾಲೀಕರುಗಳ ಮೇಲೆ ಸರ್ಕಾರವು ಕೈಗೊಂಡಿರುವ ಕಾನೂನು ಕ್ರಮಗಳೇನು ;

(ಈ) ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಪಡಿತರದಾರರಿಗೆ ಎಷ್ಟು ಪ್ರಮಾಣದ ಆಹಾರ ಧಾನ್ಯಗಳನ್ನು ವಿತರಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಪಡಿತರ ಅಂಗಡಿಗಳಲ್ಲಿ ೨ಜಿ ಆಧಾರಿತ ತೂಕದ ಯಂತ್ರಗಳು

**ಶ್ರೀ ಸಿದ್ದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೮೯ (೩೭೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಡಿತರ ಅಂಗಡಿಗಳಲ್ಲಿ ತೂಕ ಮತ್ತು ಅಳತೆಯಲ್ಲಿ ಮೋಸವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕೈಗೊಂಡಿರುವ ಕ್ರಮಗಳೇನು ;

(ಆ) ೨ಜಿ ಮೊಬೈಲ್ ಸಿಮ್ ಆಧಾರಿತ ತೂಕದ ಯಂತ್ರಗಳು ಮೂಲೆಗುಂಪಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಪಡಿತರ ಅಂಗಡಿಗಳಲ್ಲಿ ೨ಜಿ ಆಧಾರಿತ ತೂಕ ಮತ್ತು ಬಿಲ್ಲಿಂಗ್ ಯಂತ್ರವನ್ನು ಅಳವಡಿಸಲಾಗಿದೆ ; ಇದರಲ್ಲಿ ಕಾರ್ಯನಿರ್ವಹಿಸುತ್ತಿರುವ ಯಂತ್ರಗಳ ಸಂಖ್ಯೆ ಎಷ್ಟು ; ಸ್ಥಗಿತಗೊಂಡಿರುವ ಸಂಖ್ಯೆ ಎಷ್ಟು ; ಕಾರಣವೇನು ?

## ಪರೀಕ್ಷಾ ಪೂರ್ವ ತರಬೇತಿ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :-**

೨೯೦ (೩೭೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಯು.ಪಿ.ಎಸ್.ಸಿ. ಪರೀಕ್ಷೆಗೆ ಕೂರಲು ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ತರಗತಿಗಳನ್ನು ನಡೆಸಲಾಗುತ್ತಿದೆಯೇ ;

(ಆ) ನಡೆಯುತ್ತಿದ್ದಲ್ಲಿ, ಕಳೆದ ಎಷ್ಟು ವರ್ಷಗಳಿಂದ ಈ ತರಬೇತಿ ನಡೆಯುತ್ತಿದೆ ; ಯಾವ ಯಾವ ಕಡೆಗಳಲ್ಲಿ ನಡೆಯುತ್ತಿದೆ ?

## ವ್ಯಾಪಾರಿ ಮಳಿಗೆಯುಕ್ತ ಬಸ್ ನಿಲ್ದಾಣಗಳು

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :-**

೨೯೧ (೩೮೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿರುವ ವ್ಯಾಪಾರಿ ಮಳಿಗೆಯುಕ್ತ ಬಸ್ ನಿಲ್ದಾಣಗಳ ಸಂಖ್ಯೆ ಎಷ್ಟು ;

(ಆ) ಈ ಬಸ್ ನಿಲ್ದಾಣಗಳಲ್ಲಿ ಎಷ್ಟು ಕಡೆ ತೋಟಗಾರಿಕೆ ಇಲಾಖೆಯ HOPCOMS ಸಂಸ್ಥೆಗೆ ಮಳಿಗೆಯನ್ನು ನೀಡಿ ತನ್ಮೂಲಕ ರೈತರು

ಬೆಳೆದ ತರಕಾರಿ ಹಣ್ಣು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದೆ ?

## ಬಾಲಕರ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಕೊರತೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೯೨ (೩೯೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಬಾಲಕರ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರ ವಿವರ ನೀಡುವುದು)

(ಆ) ಹಡಗಲಿ ಮತ್ತು ಸಂಡೂರ ತಾಲ್ಲೂಕಿನಲ್ಲಿ ಸದರಿ ವಿದ್ಯಾರ್ಥಿ ನಿಲಯಗಳ ಅವಶ್ಯಕತೆ ಇರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಈ ಎರಡು ತಾಲ್ಲೂಕಿನ ಎಷ್ಟು ಕಡೆ, ಎಲ್ಲೆಲ್ಲಿ ವಿದ್ಯಾರ್ಥಿ ನಿಲಯಗಳ ಅವಶ್ಯಕತೆ ಇದೆ (ವಿವರ ನೀಡುವುದು) ;

(ಈ) ಕೊರತೆ/ಅವಶ್ಯಕತೆ ಇರುವ ಈ ಎರಡು ತಾಲ್ಲೂಕುಗಳಿಗೆ ಶೀಘ್ರವಾಗಿ ವಿದ್ಯಾರ್ಥಿನಿಲಯಗಳ ಮಂಜೂರಾತಿಯನ್ನು ಯಾವ ಕಾಲಮಿತಿಯಲ್ಲಿ ಮಾಡಲಾಗುತ್ತದೆ ?

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ನೀಡಿದ ಅನುದಾನ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೯೩ (೩೯೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಮಂಜೂರಾದ, ಬಿಡುಗಡೆಯಾದ ಮತ್ತು ಖರ್ಚಾದ ಹಣ ಎಷ್ಟು (ವರ್ಷವಾರು ವಿವರ ನೀಡುವುದು);

(ಆ) ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ನೀಡಲಾದ ಹಣದಲ್ಲಿ ಮಂಡಳಿ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಹಂಚಿಕೆ ಮಾಡಿದ ಮೊತ್ತವೆಷ್ಟು? (ವರ್ಷವಾರು ಮತ್ತು ಜಿಲ್ಲಾವಾರು ವಿವರ ಒದಗಿಸುವುದು)

## ಬೆಳೆ ಸಂರಕ್ಷಣೆ ಮಾಡಲು ಉಗ್ರಾಣ ನಿರ್ಮಾಣ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೯೪ (೩೮೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಎಷ್ಟು ಕಡೆ ಜಿಲ್ಲೆಯ ರೈತರು ಬೆಳೆದ ಬೆಳೆ ಸಂರಕ್ಷಣೆ ಮಾಡಲು ಉಗ್ರಾಣಗಳನ್ನು ನಿರ್ಮಾಣ ಮಾಡಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಪ್ರಸ್ತುತ ಎಷ್ಟು ಕಡೆ ಉಗ್ರಾಣ ನಿರ್ಮಾಣ ಕಾಮಗಾರಿ ನಡೆಯುತ್ತಿದೆ; ಮತ್ತು ಹೊಸದಾಗಿ ಎಷ್ಟು ಉಗ್ರಾಣಗಳನ್ನು ಮಂಜೂರು ಮಾಡಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು) ;

(ಇ) ಉಗ್ರಾಣಗಳ ಕೊರತೆಯಿಂದ ರೈತರು ಬೆಳೆದ ಬೆಳೆ ಹಾಳಾಗುತ್ತಿರುವ ಎಷ್ಟು ಪ್ರಕರಣಗಳು ಪ್ರಸಕ್ತ ವರ್ಷದಲ್ಲಿ ಕಂಡು ಬಂದಿವೆ? (ತಾಲ್ಲೂಕುವಾರು ವಿವರ ನೀಡುವುದು)

## ಕಲಂ–೩೭೧ಜೆ ಪ್ರಕಾರ ಸಿಬ್ಬಂದಿ ನೇಮಕ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೯೫ (೩೯೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಕಲಂ–೩೭೧ಜೆ ನಿಯಮದ ಅನುಸಾರ ಸಿಬ್ಬಂದಿ ನೇಮಕ ಪ್ರಕ್ರಿಯೆ ಪ್ರಾರಂಭಿಸಲಾಗಿದೆಯೆ ;

(ಆ) ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಚಾಲಕ, ನಿರ್ವಾಹಕ ಮತ್ತು ತಾಂತ್ರಿಕ ಸಿಬ್ಬಂದಿ ಕೊರತೆ ಇರುವುದು ನಿಜವೇ ;

(ಇ) ಸಿಬ್ಬಂದಿಗಳ ಕೊರತೆಯಿರುವುದಿಂದ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ಹೆಚ್ಚಿನ ಹೊರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕೊರತೆಯಿರುವ ಸಿಬ್ಬಂದಿಯನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುತ್ತದೆ ?

## ವಸತಿ ಶಾಲೆಗಳು ಮತ್ತು ವಸತಿ ರಹಿತ ಶಾಲೆಗಳು :ವಸತಿ ನಿಲಯಗಳ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೯೬ (೩೯೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಇರುವ ಮೊರಾರ್ಜಿ, ಕಿತ್ತೂರ ರಾಣಿ ಚೆನ್ನಮ್ಮ ಆದರ್ಶ ಶಾಲೆಗಳು ವಸತಿಸಹಿತ, ವಸತಿರಹಿತ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಈ ಶಾಲೆಗಳ ಪೈಕಿ ಎಷ್ಟು ಶಾಲೆಗಳಿಗೆ ಸ್ವಂತ ಕಟ್ಟಡ ಇದೆ, ಎಷ್ಟು ಶಾಲೆಗಳು ಬಾಡಿಗೆ ಕಟ್ಟಡದಲ್ಲಿದೆ ಬಾಡಿಗೆಗಾಗಿ ಸರ್ಕಾರ ಈ ಶಾಲೆಗಳಿಗೆ ವೆಚ್ಚ ಮಾಡುತ್ತಿರುವ ಹಣವೆಷ್ಟು ;

(ಇ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳು ಎಷ್ಟು ;

(ಈ) ಈ ವಸತಿ ಶಾಲೆಗಳಿಗೆ, ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣಗಳೇನು ?

## ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಅಂಗವಿಕಲ ನೌಕರರು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :-**

೨೯೭ (೩೩೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜಕಲ್ಯಾಣ ಇಲಾಖೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗವಿಕಲ ನೌಕರರುಗಳ ನಿಖರವಾದ ಸಂಖ್ಯೆಯ ವಿವರ ಮತ್ತು ಅವರುಗಳಿಗೆ ನೀಡಿರುವ ಅಂಗವಿಕಲತೆಯು ವಿಶೇಷ ಭತ್ಯೆಯು ವೃತ್ತಿ ಸೌಲಭ್ಯಗಳೇನು (ವಿವರದೊಂದಿಗೆ ಮಾಹಿತಿ ನೀಡುವುದು) ?

## ವೈದ್ಯರುಗಳ ಕೊರತೆ

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೯೮ (೩೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವೈದ್ಯರುಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು) ;

(ಇ) ರಾಜ್ಯದಲ್ಲಿ ಯಾವ ಆಸ್ಪತ್ರೆಯಲ್ಲಿ ವೈದ್ಯರುಗಳ ಕೊರತೆ ಇದೆ (ಜಿಲ್ಲಾವಾರು ಮಾಹಿತಿ ನೀಡುವುದು) ?

## ಬಿ.ಪಿ.ಎಲ್ ಕಾರ್ಡುದಾರರ ಮಾಹಿತಿ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೨೯೯ (೩೮೫) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಪಿ.ಎಲ್ ಕಾರ್ಡುಗಳನ್ನು ನೀಡಲು ಇರುವ ಮಾನದಂಡಗಳೇನು;

(ಆ) ರಾಜ್ಯದಲ್ಲಿ ಇದುವರೆವಿಗೂ ನೀಡಿರುವ ಬಿ.ಪಿ.ಎಲ್ ಕಾರ್ಡುದಾರರ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 03353/1000 ಪ್ರತಿಗಳು/24-06-2014